# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 139 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 14–12–2023 ಗುರುವಾರ | ಪುಟ: 4 | ಬೆಲೆ : ರೂ.2–00

Volume - 01 Issue - 139 | Title- Code: KARKAN 28269 | Chitradurga | Date: 14-12-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ನೋಡುಗರ ಬಾಯಲ್ಲಿ ನೀರೂರಿಸಿದ ಸಿರಿಧಾನ್ಯ ಪಾಕಗಳು 2

ಹಿರಿಯೂರು ನಗರದ ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿ 3

23ರಿಂದ ದಾವಣಗೆರೆ ಬೆಣ್ಣೆದೋಸೆ ಹಬ್ಬ 4



ಸುದ್ದಿ, ಜಾಹಿರಾತಿಗೆ 9686622252


**ಫಾಸ್ಟ್ ನ್ಯೂಸ್**

## ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ಸೆಸ್ ವಿಧಿಸುವ ಸಾಧ್ಯತೆ

» **ಬೆಂಗಳೂರು**

ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನ ಸಾಮಾನ್ಯರು ಸಂಕಷ್ಟಕ್ಕೆ ಸಿಲುಕಿರುವಾಗಲೇ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ಸೆಸ್ ವಿಧಿಸುವ ಮೂಲಕ ಬೆಲೆ ಏರಿಕೆ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ.

ಪ್ರತಿ ಲೀಟರ್ ಪೆಟ್ರೋಲ್ ಮತ್ತು ಡಿಸೇಲ್ ಮೇಲೆ 1 ರೂ. ಸೆಸ್ ವಿಧಿಸಲು ಸರ್ಕಾರ ಮುಂದಾಗಿದ್ದು, ಈ ಹಣವನ್ನು ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕೆ ಬಳಕೆ ಮಾಡಲಾಗುವುದು ಎಂದು ಹೇಳಲಾಗಿದೆ. ಇದರಿಂದ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ರಾಜ್ಯದಲ್ಲಿ 1 ರೂ. ಹೆಚ್ಚಾಗಲಿದೆ ಎಂದು ಹೇಳಲಾಗಿದೆ.

ಪೆಟ್ರೋಲ್ ಮತ್ತು ಡೀಸೆಲ್ ಮೇಲೆ 1 ರೂ. ಸೆಸ್ ವಿಧಿಸಿ ಆ ಹಣವನ್ನು ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕೆ ಬಳಕೆ ಮಾಡುವ ಸಂಬಂಧ ರಾಜ್ಯದ ಕಾರ್ಮಿಕ ಇಲಾಖೆ ಪ್ರಸ್ತಾವವನ್ನು ಸಿದ್ಧಪಡಿಸಿದ್ದು, ಬೆಳಗಾವಿಯಲ್ಲಿ ನಡೆಯತ್ತಿರುವ ವಿಧಾನಮಂಡಲದ ಅಧಿವೇಶನ ನಂತರ ಈ ಪ್ರಸ್ತಾವನೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಕಾರ್ಮಿಕ ಇಲಾಖೆ ಸಲ್ಲಿಸಲಿದೆ ಎಂದು ಕಾರ್ಮಿಕ ಇಲಾಖೆಯ ಮೂಲಗಳು ಹೇಳಿವೆ. ಕಾರ್ಮಿಕ ಇಲಾಖೆಯ ಈ ಪ್ರಸ್ತಾವನೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಒಪ್ಪಿಕೊಂಡರೆ ಪೆಟ್ರೋಲ್, ಡೀಸೆಲ್ ಬೆಲೆ 1 ರೂ. ಏರಿಕೆಯಾಗಲಿದೆ. ಪೆಟ್ರೋಲ್ ಮತ್ತು ಡೀಸೆಲ್ ಮೇಲೆ 1 ರೂ. ಸೆಸ್ ವಿಧಿಸುವ ಬಗ್ಗೆ ಹಣಕಾಸು ಇಲಾಖೆಯ ಜವಾಬ್ದಾರಿ ಹೊತ್ತಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯನವರೇ ತೀರ್ಮಾನ ಕೈಗೊಳ್ಳಬೇಕಾಗುತ್ತದೆ.ಅಂತಿಮವಾಗಿಮುಖ್ಯಮಂತ್ರಿ ಸಿದ್ಧರಾಮಯ್ಯ ನವರು ಪೆಟ್ರೋಲ್ ಮತ್ತು ಡೀಸೆಲ್ ಮೇಲೆ 1 ರೂ. ಸೆಸ್ ವಿಧಿಸುವ ಕಾರ್ಮಿಕ ಇಲಾಖೆಯ ಪ್ರಸ್ತಾವನೆ ಒಪ್ಪಿಕೊಳ್ಳುತ್ತಾರೋ, ಇಲ್ಲವೋ ಎಂಬುದು ಕುತೂಹಲ ಮೂಡಿಸಿದೆ. ಈಗಾಗಲೇ ಬೇಳೆ ಕಾಳುಗಳು ಸೇರಿದಂತೆ ಆಹಾರ ಧಾನ್ಯಗಳ ಬೆಲೆ ಏರಿಕೆಯಾಗಿದ್ದು, ಜನಸಾಮಾನ್ಯರು ಬೆಲೆ ಏರಿಕೆಯಿಂದ ಕಂಗಾಲಾಗಿದ್ದಾರೆ. ಈ ನಡುವೆ ಪ್ರಮಾಣಪತ್ರ, ಒಪ್ಪಂದ, ಕರಾರು ಅಫಿಡೆವಿಟ್ ಮತ್ತಿತರ ವ್ಯವಹಾರಗಳಿಗೆ ಮುದ್ರಾಂಕ ಶುಲ್ಕ ವಿಧಿಸುವ ತೀರ್ಮಾನವನ್ನು ಸರ್ಕಾರ ಮಾಡಿದ್ದು, ಈ ಸಂಬಂಧ ವಿಧೇಯಕವನ್ನು ಮಂಡನೆ ಮಾಡಿ ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲೇ ಅನುಮೋದನೆ ಪಡೆಯಲಾಗಿದೆ.

ಇದೆಲ್ಲದರ ಮಧ್ಯೆ ಈಗ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ 1 ರೂ. ಸೆಸ್ ವಿಧಿಸುವ ಸರ್ಕಾರದ ಚಿಂತನೆ ಜನಸಾಮಾನ್ಯರಿಗೆ ಗಾಯದ ಮೇಲೆ ಬರೆ ಎಳೆದಂತಾಗಲಿದೆ.

# ಚಳಿಗಾಲ ಅಧಿವೇಶನದಲ್ಲಿ ಬೆಳೆವಿಮೆ ಹಣ ದುರುಪಯೋಗದ ಬಿಸಿ

## ಸಮಗ್ರ ತನಿಖೆಗೆ ಸಿಒಡಿಗೆ ವಹಿಸಲು ಸರ್ಕಾರಕ್ಕೆ ಶಾಸಕ ಟಿ.ರಘುಮೂರ್ತಿ ಒತ್ತಾಯ

» **ಚಿತ್ರದುರ್ಗ**

ಚಳ್ಳಕೆರೆ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬೆಳೆ ವಿಮೆ ಹಾಗೂ ಬೆಳೆ ಪರಿಹಾರದಲ್ಲಿ ಅವ್ಯವಹಾರ ನಡೆದಿದ್ದು ಈ ಎಲ್ಲಾ ಪಂಚಾಯಿತಿಗಳನ್ನು ಸಮಗ್ರ ತನಿಖೆ ಮಾಡುವ ದೃಷ್ಟಿಯಿಂದ ಈ ಅವ್ಯವಹಾರವನ್ನು ಸಿಒಡಿ ತನಿಖೆಗೆ ವಹಿಸಬೇಕು ಎಂದು ಶಾಸಕ ಟಿ.ರಘುಮೂರ್ತಿ ಅಧಿವೇಶನಲ್ಲಿ ಆಗ್ರಹಿಸಿದ್ದಾರೆ.

ಬುಧವಾರ ಗಮನ ಸೆಳೆಯುವ ಪ್ರಶ್ನೆಗೆ ಸಂಬಂಧಿಸಿದಂತೆ ಅಧಿವೇಶನದಲ್ಲಿ ಮಾತನಾಡಿ ಚಳ್ಳಕೆರೆ ತಾಲೂಕಿನ ಪಿ.ಮಹಾದೇವಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2022–23ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಡಿ ನೋಂದಾಯಿತ ಖಾತೆದಾರರಿಗೆ ಬೆಳೆ ವಿಮೆ ಪರಿಹಾರ ನೀಡುವಲ್ಲಿ ಅವ್ಯವಹಾರವಾಗಿರುವ ಮಾಹಿತಿಯನ್ನು ನಮ್ಮ ಕೃಷಿ ಸಚಿವರಾದ ಎನ್.ಚೆಲುವರಾಯಸ್ವಾಮಿ ಅವರ ಅವರ ಗಮನಕ್ಕೆ ತಂದಿದ್ದು ಅವರು ಉತ್ತರ ನೀಡಿದ್ದಾರೆ.

ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕು.ಇದು ಕರ್ನಾಟಕ ರೈತ ಪ್ರಧಾನ ಮಂತ್ರಿ ರೈತ ಸುರಕ್ಷಾ ಫಸಲ್ ಭೀಮಾ ಯೋಜನೆಯಲ್ಲಿ ಬರುತ್ತದೆ. ಚಳ್ಳಕೆರೆತಾಲೂಕಿನ ಪಿ.ಮಹದೇವಪುರದಲ್ಲಿ ವಿಮಾ ಕಂಪನಿಯಾದ ಸೋಂಪೋ ಜನರಲ್ ಇನ್ಸರೆನ್ಸ್ ಕಂಪನಿ ಸುಮಾರು 83 ಲಕ್ಷ ಅವ್ಯವಹಾರ ಮಾಡಿದೆ ಎಂದು ಅಧಿಕಾರಿಗಳ ತಂಡ ವರದಿ ನೀಡಿದ್ದಾರೆ.

ಕೃಷಿ ಸಚಿವರು 83 ಲಕ್ಷ ಅವ್ಯವಹಾರದ ಹಣ ವಾಪಸ್ ಪಡೆಯುತ್ತೇವೆ ಮತ್ತು ಕಾನೂನು ಕ್ರಮ ಜರುಗಿಸುತ್ತೇವೆ ಎಂದು ಉತ್ತರ ನೀಡಿದ್ದಾರೆ .ಆದರೆ ರಾಜ್ಯದಲ್ಲಿ ಚಳ್ಳಕೆರೆ ತಾಲೂಕು ಅತಿ ಕಡಿಮೆ ಮಳೆ ಬೀಳುವ ತಾಲೂಕು ಆಗಿದೆ. ಬೆಳೆ ವಿಮೆ ಮತ್ತು ಬೆಳೆ ಪರಿಹಾರ ಅತ್ಯಂತ ಮುಖ್ಯವಾಗುತ್ತದೆ.

ಬೆಳೆವಿಮೆಗಾಗಿ ಒಂದು ಲಕ್ಷಕ್ಕಿಂತ ಹೆಚ್ಚು ನೊಂದಣಿ ಮಾಡಿರುತ್ತಾರೆ. ಹಾಗಾಗಿ ಚಳ್ಳಕೆರೆ ಕ್ಷೇತ್ರದ ನನ್ನ ಕ್ಷೇತ್ರದ 20 ಗ್ರಾಮ ಪಂಚಾಯತಿಯಲ್ಲಿ ತನಿಖೆ ಮಾಡಬೇಕು ಎಂದರು.

ತಾಲೂಕಿನ ಬೀಳು ಭೂಮಿ ಹಾಗೂ ನೋಂದಾಯಿತ ಬೆಳೆಯಲ್ಲದ ಜಮೀನುಗಳಿಗೆ ವಿಮೆ ಹಣ ಪಡೆದಿದ್ದಾರೆ. ಹೀಗೆ ಬೇರೆ ಬೆಳೆಗಳಿಗೆ ಒಟ್ಟು 80 ಪ್ರಕರಣಗಳಲ್ಲಿ 83 ಲಕ್ಷ ಕ್ಕೂ ಹೆಚ್ಚು ಬೆಳೆ ವಿಮೆ ಹಣವು ದುರುಪಯೋಗವಾಗಿದೆ. ಜಮೀನು ಇರುವ ಮೂಲ ಖಾತೆದಾರರ ಬದಲಿಗೆ ಬೇರೆಯೊಬ್ಬರ ಹೆಸರಿಗೆ ನೋಂದಣಿ ಮಾಡಿಸಿದ 2 ಪ್ರಕರಣಗಳಲ್ಲಿ 1.90 ಲಕ್ಷ ರೂ. ಬೆಳೆ ವಿಮೆ ಹಣ ಪಡೆದು ಮೂಲ ರೈತರಿಗೆ ವಂಚಿಸಲಾಗಿದೆ. ಬೆಳೆ ಪರಿಹಾರದಲ್ಲಿ ಸಹ ಹೆಚ್ಚಿನ ಗಮನ ಹರಿಸಬೇಕು.ಸಿಒಡಿ ತನಿಖೆಯ ಮೂಲಕ ಈ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಸೇರಿ ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಸಹಕರಿಸಿದ ಎಲ್ಲಾರನ್ನು ತನಿಖೆಗೆ ಒಳಪಡಿಸಿ ಶಿಕ್ಷೆಗೆ ಗುರಿಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಇದರ ಜೊತೆಗೆ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯು ಸಾಕಷ್ಟು ಅವೈಜ್ಞಾನಿಕವಾಗಿದ್ದು ಸಚಿವರ ಜೊತೆ ಚರ್ಚೆ ನಡೆಸಿದ್ದು ಮಾರ್ಪಡು ಮಾಡುವ ಭರವಸೆ ನೀಡಿದ್ದಾರೆ ಎಂದು ಹೇಳಿದರು.



- ಬೆಳೆವಿಮೆ ಮತ್ತು ಬೆಳೆ ಪರಿಹಾರದಲ್ಲಿ ನಡೆದಿರುವ ಅವ್ಯವಹಾರ ಸಿಒಡಿ ತನಿಖೆಗೆ ಆಗ್ರಹ
- ಚಳ್ಳಕೆರೆ ಕ್ಷೇತ್ರ ೨೦ ಗ್ರಾಮ ಪಂಚಾಯತಿಗಳಲ್ಲಿ ಬೆಳೆ ವಿಮೆ ಸಮಗ್ರ ತನಿಖೆ.
- ಫಸಲ್ ಭೀಮಾ ಯೋಜನೆ ಅವೈಜ್ಞಾನಿಕವಾಗಿದ್ದು ಬದಲಾವಣೆಗೆ ಒತ್ತಾಯ.
- ೮೦ ಕ್ಕೂ ಹೆಚ್ಚು ಪ್ರಕರಣದಲ್ಲಿ ೮೩ ಲಕ್ಷ ಹಣ ದುರುಪಯೋಗ
- ಇನ್ಶೈನ್ಸ್ ಕಂಪನಿಗಳ ಮೇಲೆ ಸೂಕ್ತ ಕ್ರಮಕ್ಕೆ ಆಗ್ರಹ
- ಶಾಮೀಲಾಗಿರುವ ಅಧಿಕಾರಿಗಳಿಗೆ ಶಿಕ್ಷೆಗೆ ಗುರಿಯಾಗಬೇಕು.
- ಸಿಒಡಿ ತನಿಖೆಯಿಂದ ರಾಜ್ಯದ ರೈತರಿಗೆ ಅನುಕೂಲ

## ಅಕ್ಕಿ ಕಳ್ಳರನ್ನು ಹಿಡಿದ ಸಾರ್ವಜನಿಕರು

**ಚಿತ್ರದುರ್ಗ:** ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿ ಯೋಜನೆಗಳಲ್ಲಿ ಅತ್ಯಂತ ಜನಪ್ರಿಯ ಯೊಜನೆಯಾಗಿ ಬಡವರಿಗೆ ವರವಾಗಿರುವಂತಹ ಅನ್ನಭಾಗ್ಯ ಯೋಜನೆ ಮೂಲಕ ಉಚಿತವಾಗಿ ಅಕ್ಕಿ ನೀಡುತ್ತಿದೆ. ಆದರೆ, ಈ ಅಕ್ಕಿ ಕಳ್ಳರ ಮತ್ತು ಕಾಳಸಂತೆಯಲ್ಲಿ ಮಾರಟವಾಗುತ್ತಿದೆ ಅನೇಕ ಘಟನೆಗಳು ನಾವು ರಾಜ್ಯದಲ್ಲಿ ನೋಡುತ್ತಿದ್ದೇವೆ. ಇಂತಹ ಪ್ರಕರಣಗಳು ಹೆಚ್ಚುತ್ತಿರುವ ನಡುವೆ ಮತ್ತೊದು ಪ್ರಕರಣ ಚಿತ್ರದುರ್ಗ ನಗರದ ಕೆಳಗೋಟೆ ವ್ಯಾಪ್ತಿಯಲ್ಲಿ ನಡೆದಿದೆ. ಸ್ಥಳೀಯರು ಅಕ್ರಮವಾಗಿ ಅಕ್ಕಿಸಾಗಿಸುತ್ತಿದ್ದ ವಾಹನವನ್ನು ಅಕ್ಕಿ ಸಮೇತವಾಗಿ ರೆಡ್ ಹ್ಯಾಂಡ್ ಆಗಿ ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಬೊಲೆರೊ ಪಿಕಪ್ ವಾಹನದಲ್ಲಿ ಅನ್ನಭಾಗ್ಯದ ನ್ಯಾಯಬೆಲೆ ಅಂಗಡಿಯಿಂದ ಅಕ್ರಮವಾಗಿ ಸಾಗಾಣೆ ಮಾಡುತ್ತಿದ್ದ ಹತ್ತು ಚೀಲ ಅಕ್ಕಿಯನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಈ ಅಕ್ಕಿ ಅನ್ನಭಾಗ್ಯಕ್ಕೆ ಸಂಬಂಧಿಸಿದ್ದು, ಎಂದು ಆಹಾರ ಇಲಾಖೆ ಅಧಿಕಾರಿಗಳು ಖಚಿತಪಡಿಸಿದ್ದಾರೆ.ಅಕ್ರಮವಾಗಿ ಅಕ್ಕಿಮಾರಾಟ ಮಾಡದ ನ್ಯಾಯಬೆಲೆ ಅಂಗಡಿಯವರಿಗೂ ಸ್ಥಳೀಯರು ತರಾಟೆಗೆ ತೆಗೆದುಕೊಂಡಿರುವ ವೀಡಿಯೋ ಹರಿದಾಡುತ್ತಿದೆ. ಅಕ್ಕಿಸಾಗಿಸುತ್ತಿದ್ದ ವಾಹನವನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಅಕ್ಕಿಸಾಗಿಸುತ್ತಿದ್ದ ಆರೋಪದಲ್ಲಿ ದಾದಾಪೀರ್ ಹಾಗೂ ಷರೀಫ್ ಎಂಬುವವರ ವಿರುದ್ಧ ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಸವ ಪುತ್ಥಳಿ: ಹಣ ದುರುಪಯೋಗ ಆರೋಪ

» **ಚಿತ್ರದುರ್ಗ**

ಬಸವ ಪುತ್ಥಳಿ ನಿರ್ಮಾಣದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಪ್ರಕರಣದ ತನಿಖೆಗೆ ಜಿಲ್ಲಾಧಿಕಾರಿ ದಿವ್ಯಪ್ರಭು ನಾಲ್ವರು ಅಧಿಕಾರಿಗಳು ಒಳಗೊಂಡ ಸಮಿತಿ ರಚಿಸಿ ಆದೇಶ ಹೊರಡಿಸಿದ್ದಾರೆ.

15 ದಿನದೊಳಗೆ ತನಿಖಾ ವರದಿ ನೀಡುವಂತೆ ಸಮಿತಿಗೆ ಸೂಚಿಸಿದ್ದಾರೆ.

ಮಠದ ಹಿಂಭಾಗ 28 ಕೋಟಿ 20 ಲಕ್ಷ ವೆಚ್ಚದಲ್ಲಿ ಬಸವ ಪುತ್ಥಳಿ ನಿರ್ಮಾಣ ಮಾಡಲು ಮುರುಘಾಮಠ ಯೋಜನೆ ರೂಪಿಸಿದೆ.

ರಾಜ್ಯ ಸರ್ಕಾರದಿಂದ ಈವರೆಗೆ 35ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. 24 ಕೋಟಿ 50ಲಕ್ಷ ರೂ. ಈವರೆಗೆ ಹಣ ಖರ್ಚಾಗಿದೆ ಎಂದು ಮಠ ಲೆಕ್ಕ ತೋರಿಸಿದೆ. ಟೆಂಡರ್ ಕರೆಯದೆ 4 ಕೋಟಿ ಮೌಲ್ಯದ ಕಬ್ಬಿಣ, ಸಿಮೆಂಟ್ ಖರೀದಿಸಿದ್ದಾರೆ ಹಾಗೂ ಪ್ರತಿಮೆ ನಿರ್ಮಾಣಕ್ಕೆ ನಿಯಮ ಮೀರಿ ಖಾಸಗಿ ಸಂಸ್ಥೆಗೆ ಗುತ್ತಿಗೆ ನೀಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಹೀಗಾಗಿ ಮಾಜಿ ಸಚಿವ ಹೆಚ್. ಏಕಾಂತಯ್ಯ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದ್ದರು. ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದರು. ಈ ಮೂಲಕ ಮುರುಘಾಶ್ರೀಗೆ ಮತ್ತೊಂದು ಸಂಕಷ್ಟ ಎದುರಾಗಲಿದೆಯಾ? ಎಂಬ ಪ್ರಶ್ನೆ ಉದ್ಭವಾಗಿದೆ.

**ಪ್ರಮುಖ ಸುದ್ದಿ**

# ರಾಮ ಮಂದಿರ: ತಿಳಿದುಕೊಳ್ಳಬೇಕಾದ 10 ಸಂಗತಿ

ಭಾರತದ ಧಾರ್ಮಿಕ ಮತ್ತು ಸಾಂಸ್ಕೃತಿಕ ನೆಲೆಯಲ್ಲಿರಾಮಮಂದಿರವು ಒಂದು ಅವಿಭಜನೀಯ ಅಂಶವಾಗಿದೆ. ರಾಮಾಯಣದ ಮಹಾಕಾವ್ಯದ ನಾಯಕನಾದ ಲೋರ್ಡ್ ರಾಮನ ಜನ್ಮಸ್ಥಳವೆಂದು ನಂಬಲಿರುವ ಈ ಪವಿತ್ರ ಸ್ಥಳವು ಶತಮಾನಗಳಿಂದಲೂ ಭಕ್ತರ ಆಕರ್ಷಣೆಯ ಕೇಂದ್ರವಾಗಿದೆ. ಇತ್ತೀಚಿನ ವರ್ಷಗಳಲ್ಲಿ, ದೇವಾಲಯದ ನಿರ್ಮಾಣವು ದೇಶಾದ್ಯಂತ ಲಕ್ಷಾಂತರ ಭಕ್ತರ ಹೃದಯದಲ್ಲಿ ಭಾವನೆಗಳನ್ನು ಉಂಟುಮಾಡಿದೆ ಮತ್ತು ಭಾರತದ ಧಾರ್ಮಿಕ ಇತಿಹಾಸದಲ್ಲಿ ಒಂದು ಹೊಸ ಅಧ್ಯಾಯವನ್ನು ಪ್ರಾರಂಭಿಸಲಿದೆ.ಈ ಲೇಖನದಲ್ಲಿ, ನಾವು ರಾಮ ಮಂದಿರದ ನಿರ್ಮಾಣದ ಹಿಂದಿನ ಆಕರ್ಷಕ ಸಂಗತಿಗಳನ್ನು ಅನ್ವೇಷಿಸುತ್ತೇವೆ. ವಿನ್ಯಾಸದ ಪ್ರ□ರಣೆಗಳು, ಬಳಸಲಾಗುವ ವಸ್ತುಗಳು, ನಿರ್ಮಾಣದ ಪ್ರಗತಿ ಮತ್ತು ಭವಿಷ್ಯದ ಯೋಜನೆಗಳ ಬಗ್ಗೆ ನಾವು ತಿಳಿದುಕೊಳ್ಳುತ್ತೇವೆ. ರಾಮ ಮಂದಿರವು ಕೇವಲ ದೇವಾಲಯವಲ್ಲ; ಇದು ಭಾರತದ ಸಂಸ್ಕೃತಿ, ಪರಂಪರೆ ಮತ್ತು ನಂಬಿಕೆಗಳ ಸಂಕೇತವಾಗಿದೆ. ಈ ಐತಿಹಾಸಿಕ ನಿರ್ಮಾಣದ ಹಿಂದಿನ ಕಥೆಯನ್ನು ತಿಳಿಯುವ ಮೂಲಕ, ನಾವು ನಮ್ಮ ದೇಶದ ಶ್ರೀಮಂತತೆ ಮತ್ತು ವೈವಿಧ್ಯತೆಯನ್ನು ಹೆಚ್ಚು ಆಳವಾಗಿ ಅರ್ಥಮಾಡಿಕೊಳ್ಳಬಹುದು.

**ರಾಮ ಮಂದಿರ:** ಭಾರತದ ಹೃದಯದಲ್ಲಿ ಏಳುತ್ತಿರುವ ಐತಿಹಾಸಿಕ ನಿರ್ಮಾಣ



**1** 54,700 ಚದರ ಅಡಿ ವಿಸ್ತೀರ್ಣದ ದೇವಾಲಯದ ಪ್ರದೇಶವು ಸುಮಾರು 2.7 ಎಕರೆ ಭೂಮಿಯನ್ನು ಒಳಗೊಂಡಿದೆ. ಸಂಪೂರ್ಣ ರಾಮ ಮಂದಿರ ಸಂಕೀರ್ಣವು ಸುಮಾರು 70 ಎಕರೆಗಳಷ್ಟು ವಿಸ್ತಾರವಾಗಿರುತ್ತದೆ ಮತ್ತು ಯಾವುದೇ ಸಮಯದಲ್ಲಿ ಸುಮಾರು ಹತ್ತು ಲಕ್ಷ ಭಕ್ತರನ್ನು ಸೇರಿಸುವ ಸಾಮರ್ಥ್ಯವನ್ನು ಹೊಂದಿರುತ್ತದೆ.

**2** ಹಿಂದೂ ನಂಬಿಕೆಗಳಿಗೆ ಅನುಗುಣವಾಗಿ ವಿನ್ಯಾಸ. ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ದೇವಾಲಯದ ನಿರ್ಮಾಣವನ್ನು ಮೇಲ್ವಿಚಾರಣೆ ಮಾಡುತ್ತಿದೆ.

**3** ಬಲ ಮತ್ತು ದೀರ್ಘಾಯುಷ್ಯಕ್ಕೆ ಹೆಸರುವಾಸವಾದ ರಾಜಸ್ಥಾನದ ಪಹಾರ್‌ಪುರದ ಬನ್ಸಿ ಪರ್ವತಗಳಿಂದ ಬಂದ ಕಲ್ಲುಗಳನ್ನು ರಾಮ ಮಂದಿರದ ನಿರ್ಮಾಣದಲ್ಲಿ ಬಳಸಲಾಗುತ್ತದೆ.

**4** ರಾಮ ಮಂದಿರದ ನಿರ್ಮಾಣದಲ್ಲಿ ಉಕ್ಕು ಅಥವಾ ಇಟ್ಟಿಗೆಗಳನ್ನು ಬಳಸಲಾಗುವುದಿಲ್ಲ. ಕಲ್ಲುಗಳ ಮೇಲೆ 'ಶ್ರೀ ರಾಮ' ಎಂದು ಬರೆಯಲಾಗಿದೆ.

**5** ಸರಯು ನದಿಯ ಬಳಿಯಲ್ಲಿರುವ ಮುಖ್ಯ ದೇವಾಲಯದ ರಚನೆಯನ್ನು ಸುತ್ತುವರಿಯಲು ಚಿಕ್ಕ ದೇವಾಲಯಗಳು.

**6** ಮೂರು ಮಹಡಿಗಳು, 1 ಶಿಖರ ಮತ್ತು 5 ಗುಮ್ಮಟದ ಆಕಾರದ ಮಂಟಪಗಳು. ಎತ್ತರವನ್ನು 141 ರಿಂದ 161 ಅಡಿಗಳಿಗೆ ಹೆಚ್ಚಿಸಲಾಗಿದೆ. ಮಂದಿರದ ಗರ್ಭಗುಡಿಯು ಅಷ್ಟಕೋನಾಕಾರದ್ದಾಗಿದ್ದರೆ, ರಚನೆಯ ಪರಿಧಿಯು ವೃತ್ತಾಕಾರದಲ್ಲಿರುತ್ತದೆ.

**7** ದೇವಾಲಯವನ್ನು ಮುಖ್ಯ ವಾಸ್ತುಶಿಲ್ಪಿ ಚಂದ್ರಕಾಂತ್ ಭಾಯಿ ಸೋಮಪುರ ವಿನ್ಯಾಸಗೊಳಿಸಿದ್ದಾರೆ, ಅವರ ತಂದೆ, ಪ್ರಭಾಕರ್‌ಜಿ ಸೋಮಪುರ, ಸೋಮನಾಥ ದೇವಾಲಯವನ್ನು ತಮ್ಮ ಮಗ ಅಶಿಶ್ ಸೋಮಪುರ ಅವರೊಂದಿಗೆ ವಿನ್ಯಾಸಗೊಳಿಸಿದ್ದರು.

**8** ದೇವಾಲಯದ ನಿರ್ಮಾಣ ಕಾರ್ಯವು 1,400 ಕೋಟಿ ರೂಪಾಯಿ □□□□□ 1,800 ಕೋಟಿ ರೂಪಾಯಿಗಳವರೆಗೆ ತೆಗೆದುಕೊಳ್ಳಬಹುದು.

**9** ಲೋರ್ಡ್ ರಾಮನ ಎರಡು ವಿಗ್ರಹಗಳು ಇರುತ್ತವೆ. ಒಂದು 1949 ರಲ್ಲಿ ಪತ್ತೆಯಾದ ನಿಜವಾದ ವಿಗ್ರಹವಾಗಿದ್ದು ದಶಕಗಳಿಂದ ಟೆಂಟ್‌ನಲ್ಲಿದೆ. ಇನ್ನೊಂದು ದೂರದಿಂದಲೇ ಕಾಣುವ ದೊಡ್ಡ ಪ್ರತಿಮೆಯಾಗಿದೆ.

**10** ಪ್ರತಿದಿನ 50,000 ಕ್ಕೂ ಹೆಚ್ಚು ಜನರು ದೇವಾಲಯಕ್ಕೆ ಭೇಟಿ ನೀಡುತ್ತಾರೆ. ದೇವಾಲಯದ ಉದ್ಘಾಟನೆಯ ನಂತರ ಈ ಸಂಖ್ಯೆ 100,000 ಕ್ಕೆ ಹೆಚ್ಚಾಗುವ ನಿರೀಕ್ಷೆಯಿದೆ.



## ಫಾಸ್ಟ್ ನ್ಯೂಸ್

### ಕಾರ್ಖಾನೆ ಗಳಲ್ಲಿ ಎಲೆಕ್ಟ್ರಾನಿಕ್ ತೂಕ ಮಷಿನ್ ಅಳವಡಿಕೆ ಕಡ್ಡಾಯ

» **ಬೆಳಗಾವಿ, ಸುವರ್ಣಸೌಧ**

ರೈತರಿಗೆ ತೂಕದಲ್ಲಿ ಮೋಸ ಆಗದಂತೆ ತಡೆಯಲು ಕಾರ್ಖಾನೆಗಳಲ್ಲಿ ಕಡ್ಡಾಯವಾಗಿ ಎಲೆಕ್ಟ್ರಾನಿಕ್ ಆಧಾರಿತ ತೂಕ ಮಷಿನ್ ಅಳವಡಿಸಲು ಕ್ರಮ ವಹಿಸಿ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಕಾನೂನು ಮಾಪನ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬೆಳಗಾವಿಯ ಸುವರ್ಣ ಸೌಧದಲ್ಲಿ ಆಹಾರ ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೆಳಗಾವಿ ಜಿಲ್ಲೆಯ ಎಲ್ಲಾ ತಾಲೂಕಿನ ಆಯ್ದ 100 ಜನ ಅಂಗಡಿಕಾರರ ಕುಂದು ಕೊರತೆ ಆಲಿಸಿದ ಸಚಿವರು ಸಾರ್ವಜನಿಕರ ದೂರು ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಪಡಿತರ ಅಕ್ಕಿ ಜೊತೆಗೆ, ಡಿಬಿಟಿ ಮೊತ್ತ ಫಲಾನುಭವಿಗಳಿಗೆ ನಿಯಮಾನುಸಾರ ಪ್ರತಿ ಮಾಹೆ ಜಮೆ ಮಾಡಿಸಬೇಕು. ಅರ್ಹ ಫಲಾನುಭವಿಗಳಿಗೆ ನಿಯಮಾನುಸಾರ ಪಡಿತರ ಚೀಟಿ ಅನುಮೋದನೆ ಮಾಡಲು ಆಹಾರ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಸಕ್ಕರೆ ಸಚಿವರಾದ ಶಿವಾನಂದ ಎಸ್ ಪಾಟೀಲ್, ಬೆಳಗಾವಿ ಜಿಲ್ಲೆಯ ಅಥಣಿ ಕ್ಷೇತ್ರದ ಶಾಸಕರಾದ ಲಕ್ಷ್ಮಣ ಸವದಿ ಹಾಗೂ ಬೀಳಗಿ ಕ್ಷೇತ್ರದ ಶಾಸಕರಾದ ಜೆಟಿ ಪಾಟೀಲ್, ಆಹಾರ ಇಲಾಖೆಯ ಕಾರ್ಯದರ್ಶಿ, ಆಯುಕ್ತರು, ಕರ್ನಾಟಕ ಆಹಾರ ನಿಗಮ ವ್ಯವಸ್ಥಾಪಕ ನಿರ್ದೇಶಕರು, ಕಾನೂನು ಮಾಪನ ಶಾಸ್ತ್ರ ಇಲಾಖೆ ನಿಯಂತ್ರಕರು, ಆಹಾರ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಶೇಷ ಅಧಿಕಾರಿಗಳು ಹಾಗೂ ಬೆಳಗಾವಿ , ಕಲಬುರ್ಗಿ ವಿಭಾಗದ ಆಹಾರ ಇಲಾಖೆಯ ಕಾನೂನು ಮಾಪನ ಶಾಸ್ತ್ರ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾ ವ್ಯವಸ್ಥಾಪಕರು ಸಭೆಯಲ್ಲಿ ಉಪಸ್ಥಿತರಿದ್ದರು.

### ಯುವಕ ಕಾಣೆ

» **ಚಿತ್ರದುರ್ಗ**



ಚಿತ್ರದುರ್ಗ ನಗರದ ರವಿ ಕುಮಾರ (20 ವರ್ಷ) ತಂದೆ ಕೊಲ್ಲಪ್ಪ ಎಂಬ ಯುವಕ 2023ರ ಮೇ 8 ರಂದು ಕಾಣೆಯಾಗಿರುವ ಪ್ರಕರಣ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಯುವಕನ ಚಹರೆ ಇಂತಿದೆ. ರವಿ ಕುಮಾರ (20 ವರ್ಷ) ತಂದೆ ಕೊಲ್ಲಪ್ಪ, 5.5 ಅಡಿ ಎತ್ತರ, ಕಪ್ಪು ಬಣ್ಣ, ಸಾಧಾರಣ ಮೈಕಟ್ಟು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಹಸಿರು ಬಣ್ಣದ ಟಿ.ಶರ್ಟ್, ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ಚಹರೆಯುಳ್ಳ ಯುವಕನ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ನಗರ ಪೊಲೀಸ್ ಠಾಣೆಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ನಗರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಅಂಬೇಡ್ಕರ್ ಬೀದಿಯ ಭೀಮರಾಜ (63 ವರ್ಷ) ತಂದೆ ಸಿದ್ದಲಿಂಗಪ್ಪ ಎಂಬ ವ್ಯಕ್ತಿಯು 2023ರ ಜುಲೈ 21 ರಂದು ಕಾಣೆಯಾಗಿರುವ ಪ್ರಕರಣ ನಗರ ಪೊಲೀಸ್ ಠಾಣೆಯಲ್ಲಿದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಭೀಮರಾಜ (63 ವರ್ಷ) ತಂದೆ ಸಿದ್ದಲಿಂಗಪ್ಪ, 5.3 ಅಡಿ ಎತ್ತರ, ಸಾಧಾರಣ ಮೈಕಟ್ಟು, ದುಂಡು ಮುಖ, ಕನ್ನಡ ಭಾಷೆ ಮಾತನಾಡುತ್ತಾರೆ.ಕಾಣೆಯಾದ ಸಮಯದಲ್ಲಿ ಕಪ್ಪು ಬಣ್ಣದ ಪ್ಯಾಂಟ್, ಬಿಳಿ ಬಣ್ಣದ ಶರ್ಟ್ ಧರಿಸಿರುತ್ತಾರೆ.ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ನಗರ ಪೊಲೀಸ್ ಠಾಣೆಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ನಗರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಡಿ.26ರಂದು ವಿಭಾಗೀಯ ಡಾಕ್ ಅದಾಲತ್

» **ಚಿತ್ರದುರ್ಗ**

ಚಿತ್ರದುರ್ಗ ಅಂಚೆ ವಿಭಾಗೀಯ ಡಾಕ್ ಅದಾಲತನ್ನು ಇದೇ ಡಿಸೆಂಬರ್ 26ರಂದು ಸಂಜೆ 4ಗಂಟೆಗೆ ಚಿತ್ರದುರ್ಗ ನಗರದ ಕೋಟೆ ರಸ್ತೆಯ ಕಾಮನಬಾವಿ ಬಡಾವಣೆಯ ಫಿಲ್ಟರ್ ಹೌಸ್ ಹತ್ತಿರದ ಚಿತ್ರದುರ್ಗ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಸಲಾಗುವುದು.

ಸಾರ್ವಜನಿಕರು ಮತ್ತು ಅಂಚೆ ಗ್ರಾಹಕರು ಅಂಚೆ ಸೇವೆಗಳಿಗೆ ಸಂಬಂಧಿಸಿದ ದೂರಗಳನ್ನು ಮತ್ತು ಸಲಹೆಗಳನ್ನು ಡಿಸೆಂಬರ್ 22ರಂದು ಅಥವಾ ಅದಕ್ಕಿಂತ ಮುಂಚಿತವಾಗಿ ಅಂಚೆ ಅಧೀಕ್ಷಕರ ಕಚೇರಿ, ಕೋಟೆ ರಸ್ತೆ, ಫಿಲ್ಟರ್ ಹೌಸ್ ಹತ್ತಿರ, ಕಾಮನ ಬಾವಿ ಬಡಾವಣೆ ಇವರಿಗೆ ಮುಂದಿನ ಕ್ರಮಕ್ಕಾಗಿ ತಲುಪುವಂತೆ ಕಳುಹಿಸಬೇಕು ಎಂದು ಚಿತ್ರದುರ್ಗ ವಿಭಾಗದ ಅಂಚೆ ಅಧೀಕ್ಷಕ ಜಿ. ಹರೀಶ್ ತಿಳಿಸಿದ್ದಾರೆ.

## ನೋಡುಗರ ಬಾಯಲ್ಲಿ ನೀರೂರಿಸಿದ ಸಿರಿಧಾನ್ಯ ಪಾಕಗಳು

# ಸಿರಿಧಾನ್ಯ ಪಾಕ ಸ್ಪರ್ಧೆ: ತರಹೇವಾರಿ ಖಾದ್ಯ

» **ಚಿತ್ರದುರ್ಗ**

ಜಿಲ್ಲಾ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆಯಲ್ಲಿ ರುಚಿ ರುಚಿಯಾದ ವಿವಿಧ ಸಿರಿಧಾನ್ಯ ಪಾಕಗಳು ನೋಡುಗರ ಬಾಯಲ್ಲಿ ನೀರೂರಿಸಿದವು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಕೃಷಿ ಇಲಾಖೆಯಿಂದ ವತಿಯಿಂದ ಬುಧವಾರ ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ-2024ರ ಅಂಗವಾಗಿ ರಾಜ್ಯಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಸಿರಿಧಾನ್ಯ ಪಾಕ ಸ್ಪರ್ಧೆ ನಡೆಯಿತು.

ಸಿರಿಧಾನ್ಯ ಪಾಕ ಸ್ಪರ್ಧೆಯಲ್ಲಿ ಸಿರಿಧಾನ್ಯಗಳ ಪೌಷ್ಠಿಕಾಂಶದ ಮಹತ್ವಗಳು, ಬಳಕೆಯ ವಿಧಾನಗಳು, ಆರೋಗ್ಯಕರ ಅಂಶಗಳ ಪ್ರಯೋಜನಗಳು ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಬಗ್ಗೆ ಅರಿವು ಮೂಡಿಸುವ ಪ್ರಯತ್ನ ಮಾಡಲಾಯಿತು.

ಸಿರಿಧಾನ್ಯ ಪಾಕ ಸ್ಪರ್ಧೆಯಲ್ಲಿ ಜಿಲ್ಲೆಯ ವಿವಿಧೆಡೆಯ ಒಟ್ಟು 26 ಜನರು ಭಾಗವಹಿಸಿ, ಸಿರಿಧಾನ್ಯಗಳ ಸಿಹಿ ಹಾಗೂ ಖಾರದ ವಿವಿಧ ಪದಾರ್ಥಗಳಾದ ಆರ್ಕದ ಅಕ್ಕಿ ಉಂಡೆ, ಸಿರಿಧಾನ್ಯ ಉಂಡೆ, ನವಣಕ್ಕಿ ಕಲ್ಲುಂಡೆ, ನವಣಕ್ಕಿ ಬೇಸನ್ ಉಂಡೆ, ರಾಗಿ ಬೆಲ್ಲದ ಬರ್ಫಿ, ಸಿರಿಧಾನ್ಯ ಬಿಸ್ಕತ್ತು, ಸಿರಿಧಾನ್ಯ ಚುರುಮುರಿ, ಸಜ್ಜೆ ಕಡಬು, ನವಣೆ ಪೇಡಾ, ಸಾವೆ ಕಿಚಡಿ, ರಾಗಿ ಹಲ್ವ, ಬರಗು ಉಂಡೆ, ಊದಲು ಪಾಯಸ, ಸಜ್ಜೆ ಲಾಡು, ಸಾಮೆ ಬಿಸಿಬೆಳೆಬಾತ್, ಸಜ್ಜೆ ರೊಟ್ಟಿ, ನವಣಕ್ಕಿ ಬಿಸಿಬೇಳೆ ಬಾತ್, ನವಣಕ್ಕಿ ಚಿತ್ರಾನ್ನ, ನವಣಕ್ಕಿ ಚಕ್ಕುಲಿ, ಸಾವೆಅಕ್ಕಿ ನಿಪ್ಪಟ್ಟು, ಸಜ್ಜೆ ಮಸಾಲೆ ರೊಟ್ಟಿ, ಸಾಮೆ ಅಕ್ಕಿಯ ಚಕ್ಕುಲಿ, ಹಾರಕ ಪಲಾವ್ ಸೇರಿದಂತೆ ಸಿರಿಧಾನ್ಯಗಳಿಂದ ತಯಾರಿಸಿದ ಖಾದ್ಯ ಪ್ರದರ್ಶಿಸಿದರು.





ಸಿರಿಧಾನ್ಯ ಖಾದ್ಯ ತಯಾರಿಕೆಗೆ ಬಳಸಿದ ಸಾಮಗ್ರಿಗಳು, ರುಚಿ, ಪ್ರದರ್ಶನ, ತೋರಿಕೆ, ಸುವಾಸನೆ, ರಚನಾ ವಿನ್ಯಾಸ, ಸ್ವಚ್ಛತೆ ಮತ್ತು ನೈರ್ಮಲ್ಯವನ್ನು ತೀರ್ಪುಗಾರರು ಪರಿಶೀಲಿಸಿ, ಅತ್ಯುತ್ತಮ ಸಿರಿಧಾನ್ಯಗಳ ಸಿಹಿ ತಿನಿಸಿಗೆ ಹಾಗೂ ಖಾರ ತಿನಿಸಿಗೆ ಪ್ರಥಮ-5000 ರೂ., ದ್ವಿತೀಯ-3000 ರೂ. ಹಾಗೂ ತೃತೀಯ- 2000 ರೂ. ನಗದು ಬಹುಮಾನ ನೀಡಲಾಯಿತು.

ಸಿರಿಧಾನ್ಯ ಸಿಹಿ ಖಾದ್ಯದಲ್ಲಿ ಸಜ್ಜೆ ಲಾಡು ತಯಾರಿಸಿದ ಹಿರಿಯೂರು ತಾಲ್ಲೂಕು ವಿವಿ.ಸಾಗರದ ಎಸ್. ಸೂರ್ಯ ಪ್ರಥಮ ಬಹುಮಾನ ಪಡೆದರು. ರಾಗಿ ಹಲ್ವ ಖಾದ್ಯ ತಯಾರಿಸಿದ ಚಿತ್ರದುರ್ಗ ತಾಲ್ಲೂಕು ದೊಡ್ಡಸಿದ್ದವ್ವನಹಳ್ಳಿಯ ಜೆ.ವಿ.ವೀಣಾ ದ್ವಿತೀಯ ಬಹುಮಾನ ಪಡೆದರು. ನವಣಕ್ಕಿ ಕಲ್ಲುಂಡೆ ಖಾದ್ಯ ತಯಾರಿಸಿದ ಹೊಸದುರ್ಗ ತಾಲ್ಲೂಕು ಕೆರೆಹೊಸಹಳ್ಳಿಯ ಎ.ವೈ.ಓಂಕಾರಮ್ಮ ತೃತೀಯ ಬಹುಮಾನ ಪಡದರು. ಸಿರಿಧಾನ್ಯ ಖಾರ ಖಾದ್ಯದಲ್ಲಿ ಸಿರಿಧಾನ್ಯ ಚುರುಮುರಿ ತಯಾರಿಸಿದ ಹೊಸದುರ್ಗ ತಾಲ್ಲೂಕು ಆನಿವಾಳದ ಪಿ.ಎಂ.ಸುಮಾ ಪ್ರಥಮ, ಹಾರಕ ಪಲಾವ್ ತಯಾರಿಸಿದ ಚಿತ್ರದುರ್ಗ ತಾಲ್ಲೂಕು ಚಿಕ್ಕಬೆನ್ನೂರಿನ ಬಿ.ಎಸ್.ಶಾಂತಕುಮಾರಿ ದ್ವಿತೀಯ ಹಾಗೂ ಸಜ್ಜೆ ಮಸಾಲೆ ರೊಟ್ಟಿ ತಯಾರಿಸಿದ ಚಿತ್ರದುರ್ಗ ನಗರದ ಕೆಳಗೋಟೆಯ ರಾಜೇಶ್ವರಿ ಬಡಿಗೇರ ತೃತೀಯ ಬಹುಮಾನ ಪಡೆದರು.

ಜಿಲ್ಲಾ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಆರೋಗ್ಯಕರ ಸಮಾಜ ನಿರ್ಮಾಣ ಮಾಡುವುದಕ್ಕೆ ಹಾಗೂ ಸಿರಿಧಾನ್ಯಗಳನ್ನು ಹೆಚ್ಚಿನ ರೀತಿಯಲ್ಲಿ ಪ್ರಚಾರ ಮಾಡುವ ಉದ್ದೇಶದಿಂದ ಸಿರಿಧಾನ್ಯ ಪಾಕ ಸ್ಪರ್ಧೆ ಏರ್ಪಡಿಸಲಾಗಿದ್ದು, ಸಿರಿಧಾನ್ಯಗಳ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಹಾಗೂ ಅರಿವು ಮೂಡಬೇಕು ಎಂದರು.

ಸಿರಿಧಾನ್ಯಗಳು ಹೆಚ್ಚಿನ ಪೌಷ್ಠಿಕಾಂಶ ಹೊಂದಿದ್ದು, ಆರೋಗ್ಯ ಕಾಪಾಡಿಕೊಳ್ಳಲು ಅತ್ಯಂತ ಪರಿಣಾಮಕಾರಿ ಆಹಾರ ಧಾನ್ಯಗಳಾಗಿವೆ. ರಾಸಾಯನಿಕ ಹಾಗೂ ಕೀಟನಾಶಕಗಳ ಬಳಕೆಯ ಆಹಾರಗಳು ಆರೋಗ್ಯದ ಮೇಲೆ ಸಾಕಷ್ಟು ದುಷ್ಪರಿಣಾಮ ಬೀರಲಿದೆ. ಆಹಾರ ಹಾಗೂ ಜೀವನ ಶೈಲಿಯಿಂದ ಮನುಷ್ಯನ ಆರೋಗ್ಯ ಹಾಳಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ನಮ್ಮ ಹಳೆಯ ಸಂಸ್ಕೃತಿ ಅಳವಡಿಸಿಕೊಂಡು ನಾವು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು. ಸಿರಿಧಾನ್ಯದ ಕಡೆಗೆ ಹೆಚ್ಚಿನ ಒಲವು ಮೂಡಿಸಬೇಕು. ಪಾಶ್ಚಿಮಾತ್ಯ ದೇಶಗಳೂ ಇತ್ತೀಚೆಗೆ ಸಿರಿಧಾನ್ಯದ ಕಡೆಗೆ ಹೆಚ್ಚಿನ ಗಮನಹರಿಸುತ್ತಿದ್ದಾರೆ. ಸಿರಿಧಾನ್ಯ ನಮ್ಮಲ್ಲಿ ಹುಟ್ಟಿದ ಬೇರಾಗಿದ್ದು, ಹಾಗಾಗಿ ಸಿರಿಧಾನ್ಯಗಳ ಬಳಕೆಗೆ ನಮ್ಮಲ್ಲಿ ಹೆಚ್ಚಿನ ರೀತಿಯಲ್ಲಿ ಪ್ರೋತ್ಸಾಹ ಹಾಗೂ ಉತ್ತೇಜನ ನೀಡಬೇಕು ಎಂದು ತಿಳಿಸಿದ ಅವರು, ನಮ್ಮ ದೇಶಿಯ ಆಹಾರ ಪದ್ಧತಿ ಅಳವಡಿಸಿಕೊಂಡರೆ ಉತ್ತಮ ಆರೋಗ್ಯದ ಜತೆಗೆ ಸದೃಢ ಸಮಾಜ ನಿರ್ಮಾಣವಾಗಲಿದೆ ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಮಾತನಾಡಿ, ಜನರ ಜೀವನಶೈಲಿ ಬದಲಾಗುತ್ತಿದ್ದಂತೆಸಾಂಪ್ರದಾಯಿಕಹಾಗೂ ಆರೋಗ್ಯಕರ ಅಡುಗೆ ಮರೆತು ಹೋಗಿದೆ. ಸಿರಿಧಾನ್ಯಗಳು ಪೌಷ್ಠಿಕತೆಗೆ ಹೆಸರುವಾಸಿ. ಹೆಚ್ಚಿನ ಪ್ರಮಾಣದ ಪ್ರೋಟಿನ್, ನಾರಿನಾಂಶವಿರುತ್ತದೆ ಎಂದು ತಿಳಿಸಿದ ಅವರು, ಸಿರಿಧಾನ್ಯಗಳ ಮೌಲ್ಯವರ್ಧಿತ ಉತ್ಪನ್ನಗಳ ಕಡೆಗೆ ರೈತರು, ಉದ್ಯಮಿಗಳು ಗಮನಹರಿಸಬೇಕು ಎಂದರು.

ಜಿಲ್ಲಾ ಮಟ್ಟದಲ್ಲಿ ಪ್ರಥಮ ಬಹುಮಾನ ಪಡೆದವರು ಇದೇ ಡಿಸೆಂಬರ್ 23ರಂದು ಬೆಂಗಳೂರಿನಲ್ಲಿ ಏರ್ಪಡಿಸುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಖಾದ್ಯ ತಯಾರಿಸಲು ಬೇಕಾಗುವ ಸಾಮಗ್ರಿಗಳನ್ನು ತಾವೇ ತೆಗೆದುಕೊಂಡು, ನಿಗದಿತ ಸ್ಥಳ ಹಾಗೂ ಸಮಯದಲ್ಲಿ ಖುದ್ದಾಗಿ ಖಾದ್ಯವನ್ನು ಅಲ್ಲಿಯೇ ತಯಾರಿಸಲು ಸಿದ್ಧರಾಗಿರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿ ಇಲಾಖೆ ಉಪನಿರ್ದೇಶಕರಾದ ಪ್ರಭಾಕರ್, ಶಿವಕುಮಾರ್, ಸಹಾಯಕ ನಿರ್ದೇಶಕರಾದ ಚಂದ್ರಕುಮಾರ್, ಪ್ರವೀಣ್ ಚೌಧರಿ ಸೇರಿದಂತೆ ಮತ್ತಿತರರು ಇದ್ದರು. ತೀರ್ಪುಗಾರರಾಗಿ ಡಾ.ಸರಸ್ವತಿ, ಎನ್.ಸುಧಾ, ಶೋಭಾ, ಡಾ.ಬಿ.ವಿ.ಸುಧಾ ಪಾಲ್ಗೊಂಡಿದ್ದರು.

# ಶೀಘ್ರ ಸಿಎಂ ನೇತೃತ್ವದ ಸಭೆ: ಶಾಸಕ ರಘುಮೂರ್ತಿ

» **ಚಳ್ಳಕೆರೆ**

ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯಾದ್ಯಂತ ಬರದ ಹಿನ್ನೆಲೆಯಲ್ಲಿ ರೈತರಿಗೆ ಬೆಳೆ ವಿಮೆ ಹಾಗೂ ಇನ್ನಿತರ ಸೌಲಭ್ಯ ನೀಡುವ ಬಗ್ಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಶೀಘ್ರದಲ್ಲೇ ಸಭೆ ನಡೆಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆಂದು ಶಾಸಕ ಟಿ.ರಘುಮೂರ್ತಿ ಮಾಹಿತಿ ನೀಡಿದರು.



ಅವರು, ಬೆಳಗಾವಿಯ ಸುವರ್ಣಸೌಧದಲ್ಲಿ ರೈತರ ಬೆಳೆ ವಿಮೆ ಕುರಿತು ಕೃಷಿ ಸಚಿವ ಚಲುವರಾಯಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡು ನಂತರ ಸಭೆಯಲ್ಲಿ ಚರ್ಚೆಯಾದ ವಿಷಯದ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿದರು.

ರಾಜ್ಯದಲ್ಲಿ ರೈತರಿಗೆ ನೆರವಾಗುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಒತ್ತಡ ಹೇರಲಾಗುವುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಸಚಿವರಾದ ಈಶ್ವರಖಂಡ್ರೆ, ಶರಣಪ್ರಕಾಶ್ ಪಾಟೀಲ್, ಪ್ರಿಯಾಂಕಖರ್ಗೆ, ಶರಣಬಸಪ್ಪ, ಗೌಡದರ್ಶನಪುರ, ಶಾಸಕರಾದ ಟಿ.ರಘುಮೂರ್ತಿ, ಕೋನಾರೆಡ್ಡಿ, ದರ್ಶನ್‌ಪುಟ್ಟಣ್ಣಯ್ಯ ಪಾಲ್ಗೊಂಡಿದ್ದರು.

# ಹೆಕ್ಟೇರ್‌ಗೆ 5000 ಪರಿಹಾರ ಧನ; ಕರ್ನಾಟಕ ರೈತ ಸಂಘ ಒತ್ತಾಯ



» **ಚಳ್ಳಕೆರೆ**

ರಾಜ್ಯ ಸರ್ಕಾರ ಈಗಾಗಲೇ ತಾಲ್ಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಪ್ರತಿ ಹೆಕ್ಟೇರ್‌ಗೆ ಎರಡು ಸಾವಿರ ಪರಿಹಾರ ಧನವನ್ನು ಪ್ರಕಟಿಸಿರುವ ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿಕೆಯನ್ನು ಅಖಂಡ ಕರ್ನಾಟಕ ರೈತ ಸಂಘ ಖಂಡಿಸುತ್ತದೆ.

ಸಂಘದ ತಾಲ್ಲೂಕು ಅಧ್ಯಕ್ಷ ಕೆ.ಚಿಕ್ಕಣ್ಣಯ್ಯ ತಹಶೀಲ್ದಾರ್‌ಗೆ ಮನವಿ ನೀಡಿ, ರೈತರಿಗೆ ಬೆಳೆವಿಮೆ ಹಾಗೂ ಬೆಳೆ ಪರಿಹಾರವನ್ನು ಪ್ರತಿ ಹೆಕ್ಟೇರ್‌ಗೆ ಎರಡು ಸಾವಿರ ನೀಡಲು ಸರ್ಕಾರ ನಿರ್ಧಾರಿಸಿದೆ ಎಂಬ ಹೇಳಿಕೆಯನ್ನು ನಮ್ಮ ಸಂಘ ಬಲವಾಗಿ ಖಂಡಿಸುತ್ತದೆ. ಲಕ್ಷಾಂತರ ರೂ ಸಾಲ ಮಾಡಿ ಬೆಳೆ ಬಾರದೆ ರೈತನ ಬದುಕು ಬೀದಿಗೆ ಬಂದಿದೆ. ಸರ್ಕಾರ ಕನಿಷ್ಟ ಪಕ್ಷ ಪ್ರತಿ ಹೆಕ್ಟೇರ್‌ಗೆ ಐದು ಸಾವಿರ ಹಣವಾದರೂ ನೀಡಬೇಕೆಂದು ಅವರು ಒತ್ತಾಯಿಸಿದರು.ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ಧಾರ್ ರೇಹಾನ್‌ಪಾಷ, ತಮ್ಮ ಮನವಿಯನ್ನು ಸರ್ಕಾರಕ್ಕೆ ಮುಂದಿನ ಕ್ರಮಕ್ಕಾಗಿ ಇಂದೇ ಕಳಿಸುವ ಭರವಸೆ ನೀಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಎಚ್.ಪ್ರಕಾಶ್, ಜುಂಜುರಗುಂಟೆ ಹನುಮಂತರಾಯ, ಎನ್.ನಾಗೇಂದ್ರ, ಕೆ. ಶಂಕ್ರಣ್ಣ, ತಿಮ್ಮಜ್ಜ, ನಾಗರಾಜ ಮುಂತಾದವರು ಉಪಸ್ಥಿತರಿದ್ದರು.

# 150 ರೂ ಹಣಕ್ಕೆ ಸ್ನೇಹಿತನ ಕೊಲೆ

» **ಚಿತ್ರದುರ್ಗ**

ಲಕ್ಷ ಲಕ್ಷ ಹಣ ಸಾಲ ಕೊಟ್ಟೋರು ಸಹ ಸಾಲ ವಾಪಸ್ ಪಡೆಯೋದಕ್ಕೆ ಹರಸಾಹಸ ಪಡುತ್ತಾರೆ. ಕೇಲವು ಬಾರಿ ಎ ಸಾಕಪ್ಪ ಕೇಳಿ ಕೇಳಿ ಸಾಕಾಗಿದೆ. ಹಾಳು ಬಡಿಸಿಕೊಂಡು ಹೋಗಲಿ , ದೇವರು ನೋಡಿಕೊಳ್ಳುತ್ತಾನೆ ಅಂತ ಕೈಚೆಲ್ಲಿ ಕುಳಿತುಕೊಳ್ಳುತ್ತಾರೆ. ಚಿತ್ರದುರ್ಗದಲ್ಲಿ ಕೇವಲ 150 ರೂಪಾಯಿಗಾಗಿ ಕೊಲೆ ಮಾಡಿರುವ ಘಟನೆ ನಡೆದು ಹೋಗಿದೆ.

ತಾಮ್ರದ ನಾಣ್ಯ ತಾಯಿ ಮಕ್ಕಳನ್ನ ಅಗಲಿಸುತ್ತದೆ ಎಂಬ ಗಾದೆ ಮಾತು ಇಂದಿಗೂ ಸುಳ್ಳಾಗಿಲ್ಲ. ಅದರಂತೆ ಎಷ್ಟೋ ಸ್ನೇಹಿತರು ಒಂದೇ ತಟ್ಟೆಯಲ್ಲಿ ಊಟ ಮಾಡಿದವರು ಹಣದ ವಿಚಾರಕ್ಕೆ ವೈಮನಸ್ಸು , ವೈಷಮ್ಯ ಬೆಳೆಸಿಕೊಂಡಿದ್ದಾರೆ.

ಕೋಟೆನಾಡು ಚಿತ್ರದುರ್ಗ( chitradurga) ತಾಲ್ಲೂಕಿನ ಕೊಡಗವಳ್ಳಿ ಗ್ರಾಮದಲ್ಲಿ ಕೇವಲ 150 ರೂ.ಗೆ ಕೊಲೆ ಆಗಿರುವ ಘಟನೆ ಮಂಗಳವಾರ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ.

ಒಂದೇ ಊರಿನ ನಾಗರಾಜ್ (60) ಹಾಗೂ ಶೇಖರಪ್ಪ (65) ಪರಸ್ಪರ ಗೆಳೆಯರಾಗಿದ್ದರು, ಈ ಹಿಂದೆ ನಾಗರಾಜ್ ಸ್ನೇಹಿತ ಶೇಖರಪ್ಪ ಬಳಿ ಕೇವಲ 150 ರೂ. ಸಾಲವಾಗಿ ಪಡೆದಿರುತ್ತಾನೆ. ನಿತ್ಯ ಕುಡಿದು ಮನೆ ಬಾಗಿಲಿಗೆ ಬಂದು ನಾಗರಾಜ್ ನನ್ನ ಹಣ ವಾಪಾಸ್ ಕೊಡು ಎಂದು ಶೇಖರಪ್ಪ ಗಲಾಟೆ ಮಾಡತ್ತಿರುತ್ತಾನೆ. ನಿತ್ಯ ಈ ಘಟನೆಯಿಂದ ಬೇಸರಗೊಂಡ ಮೃತ ವ್ಯಕ್ತಿ ಶೇಖರಪ್ಪನ ಮಗ ಮಾರುತಿ ನಿತ್ಯ ಮನೆ ಮುಂದೆ ಗಲಾಟೆ ಮಾಡುತ್ತಾನೆ. ಆತನ ಕಿರಿಕ್ ಬೇಡ ಅಂತ ತಾನೇ 150 ರೂ. ಒಂದು ವಾರದ ಹಿಂದೆ ಕೊಟ್ಟು ಕಳಿಸಿರ್ತಾನೆ. ಆದರೂ ಸುಮ್ಮನಾಗದ ಆರೋಪಿ ಶೇಖರಪ್ಪ, ಅದಾಗಿಯೂ ನಿನ್ನೆ ರಾತ್ರಿಯೂ ಮೃತನ ಮನೆ ಬಾಗಿಲಿಗೆ ಬಂದು ಕಿರಿಕ್ ಪ್ರಾರಂಭಿಸುತ್ತಾನೆ..

ಈ ಇಬ್ಬರ ಮಧ್ಯೆ ಪರಸ್ಪರ ಗಲಾಟೆ ಶುರುವಾಗಿದ್ದು ಕೊನೆಯಲ್ಲಿ ಕೊಲೆಯಲ್ಲಿ ಅಂತ್ಯವಾದ ದುರ್ಘಟನೆ ನಡೆದಿದೆ.

**ಪ್ರಮುಖ ಸುದ್ದಿ**

# ಕಳಚಿ ಬೀಳ್ತಿದೆ ಜುಂಜರಗುಂಟೆ ಗೇಟ್ ಬಸ್ ತಂಗುದಾಣ






ನಮ್ಮ ಜನ ವಿಶೇಷ

» **ಮಹದೇವಪುರ ಶಿವಮೂರ್ತಿ.**

ಪರಶುರಾಂಪುರ: ಪರಶುರಾಂಪುರ - ಸಮೀಪದ ಜುಂಜರಗುಂಟೆ ಗೇಟ್ ತಂಗುದಾಣ ಬಿದ್ದು ಹೋದರೆ , ಗೌರಿಪುರದ ಗೇಟ್ , ಕಡೇವುಡೆ ಗೇಟ್ ಗ್ರಾಮದ ಬಸ್ ತಂಗುದಾಣ ಸಂಪೂರ್ಣ ಶಿಥಿಲಗೊಂಡಿದ್ದು ಗ್ರಾಮಸ್ಥರು ಆತಂಕದಲ್ಲೇ ಅಲ್ಲಿ ಕೂಡುವಂತಾಗಿದೆ.

ಚಳ್ಳಕೆರೆ - ಪಾವಗಡಕ್ಕೆ ತೆರಳುವ ಮಾರ್ಗದ ಗೌರಿಪುರ ಸೇರಿದಂತೆ ವಿವಿದಡೆ ಪ್ರಯಾಣಿಕರ ಅನುಕೂಲಕ್ಕಾಗಿ ಬಸ್ ತಂಗುದಾಣ ನಿರ್ಮಿಸಲಾಗಿದೆ. ಸದ್ಯ ಹಲವು ತಂಗುದಾಣಗಳು ಸಂಪೂರ್ಣ ಶಿಥಿಲಗೊಂಡಿದೆ. ಪ್ರಯಾಣಿಕರು ಜೀವ ಭಯದಿಂದಲೇ ಬಸ್ ತಂಗುದಾಣದಲ್ಲಿ ಬಸ್‌ಗಾಗಿ ಕಾಯುವ ಪರಿಸ್ಥಿತಿ ಇದೆ. ಸಿಮೆಂಟ್ ಹಕ್ಕಳಿಕೆ ಉದುರುತ್ತಿದೆ. ಕಬ್ಬಿಣದ ಸರಳುಗಳು ಹೊರಗೆ ಕಾಣುತ್ತಿವೆ. ಈಗಲೋ ಆಗಲೋ ಮೇಲ್ಛಾವಣಿ ಕುಸಿದು ಬೀಳುವ ಹಂತ ತಲುಪಿದೆ.

ಸಂಬಂಧಪಟ್ಟಅಧಿಕಾರಿಗಳು ಅಪಘಾತ ಸಂಭವಿಸುವ ಮುಂಚೆಯೇ ಬಸ್ ತಂಗುದಾಣವನ್ನು ಕೆಡವಿ ಹೊಸ ತಂಗುದಾಣವನ್ನು ನಿರ್ಮಿಸಬೇಕೆಂದು ಗ್ರಾಮಸ್ಥರ ಜತೆ ಸಾವ9ಜನಿಕರು ,ವಾಹನ ಸವಾರರ ಜತೆ ಮುಂತಾದವರು ಆಗ್ರಹಿಸಿದ್ದಾರೆ.ಹಲವು ಮಾರ್ಗ ತೆರಳುವ ಜನರು ತಂಗುದಾಣದ ಒಳಗೆ ಹೋಗಲು ಸಾಧ್ಯವಾಗದ ಕಾರಣ ನೆರಳಿನ ಆಶ್ರಯ ಇಲ್ಲದೆ ಸುಡು ಬಿಸಿಲಿನಲ್ಲಿ ನಿಲ್ಲುವಂತ ಸ್ಥಿತಿ ನಿರ್ಮಾಣವಾಗಿದೆ. ತಂಗುದಾಣದ ಸುತ್ತಲೂ ಕಾಡು ಜಾತಿಯ ಗಿಡ, ಗಂಟಿ ಬೆಳೆದು ಕಸ, ಕಡ್ಡಿ ಪ್ಲಾಸ್ಟಿಕ್ ತ್ಯಾಜ್ಯ ತುಂಬಿ ಕ್ರಿಮಿ ಕೀಟಗಳ ಆವಾಸ ಸ್ಥಾನವಾಗಿದೆ. ಸಂಬಂಧಪಟ್ಟವರು ಗಮನಹರಿಸದೆ ಇದಕ್ಕೂ ನಮಗೂ ಸಂಬಂಧ ಇಲ್ಲ ಎಂದು ಜಾಣ ಕುರುಡರಂತೆ ವರ್ತಿಸುತ್ತಿದ್ದಾರೆ.

ಇನ್ನಾದರು ಸಂಬಂಧಪಟ್ಟವರು ಗಮನಹರಿಸಿ ಬಸ್ ತಂಗುದಾಣದ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

> ಚಳ್ಳಕೆರೆ ಹಾಗೂ ಪಾವಗಡ ಮಾರ್ಗ ಸೇರಿದಂತೆ ಹೋಬಳಿ ವ್ಯಾಪ್ತಿಯ ಇನ್ನಿತರೆ ಮಾರ್ಗ ಮಧ್ಯದಲ್ಲಿ ಬರುವ ತಂಗುತಾಣಗಳನ್ನ ಮೆಂಟೇನ್ಸೇಶ್ ಇಲ್ಲದೆ ಅವು ಸಹಾ ಪ್ರಯಾಣಿಕರು ಕೂರದಂತಾಗಿ ನಿರುಪಯುಕ್ತವಾಗಿವೆ.
>
> » **ಬೈಕ್ ಸವಾರ ಲೊಕೇಶ್ .**

> ಬೇಸಿಗೆಯಂತೆ ಬಿಸಿಲು ಹೆಚ್ಚಾಗಿ ಕಳೆದ ದಿನಗಳಿಂದ ನೆತ್ತಿ ಸುಡುತ್ತಿರುವುದರಿಂದ ನೆರಳಿನ ಆಶ್ರಯ ಅವಶ್ಯವಾಗಿದೆ. ಜುಂಜರಗುಂಟೆ ಗೇಟ್ ನಲ್ಲಿ ತಂಗುದಾಣ ಬಿದ್ದು ಹೋಗಿದೆ ಯಾರಿಗೆ ಹೇಳೋಣ ನಮ್ಮ ಪ್ರಾಬ್ಲಂ ಶಿಥಿಲಾವಸ್ಥೆ ಕಂಡು ಮರದ ನೆರಳು ಆಶ್ರಯ ಪಡೆಯುವಂತಾಗಿದೆ.
>
> » **ಹೆಸರೇಳಿಚ್ಚಿಸದ ವಿದ್ಯಾರ್ಥಿನಿ**

## ಫಾಸ್ಟ್ ನ್ಯೂಸ್

### ಪ್ರಧಾನಮಂತ್ರಿ ಕೌಶಲ್ಯ ಕೇಂದ್ರದಲ್ಲಿ ಉಚಿತ ತರಬೇತಿ ಆರಂಭ

» **ಚಿತ್ರದುರ್ಗ**

ಚಿತ್ರದುರ್ಗದ ಶ್ರೀ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದಲ್ಲಿರುವ ಪ್ರಧಾನಮಂತ್ರಿ ಕೌಶಲ್ಯ ಕೇಂದ್ರದಲ್ಲಿ ವಿವಿಧ ಉಚಿತ ತರಬೇತಿಗಳಿಗೆ ಪ್ರವೇಶ ಆರಂಭವಾಗಿದೆ. ಚಿತ್ರದುರ್ಗದ ಪ್ರಧಾನಮಂತ್ರಿ ಕೌಶಲ್ಯ ಕೇಂದ್ರವು ಕೇಂದ್ರ ಸರ್ಕಾರದ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ, ನ್ಯಾಷನಲ್ ಸ್ಕಿಲ್ ಡೆವಲಪ್‌ಮೆಂಟ್ ಕಾರ್ಪೋರೇಷನ್ ಪ್ರಾಯೋಜಿತ, ಸ್ಕಿಲ್ ಇಂಡಿಯಾದ ಪ್ರಧಾನಮಂತ್ರಿ ಕೌಶಲ್ಯ ವಿಕಾಸ ಯೋಜನೆಯ ವಿವಿಧ ಅಲ್ಪಾವಧಿಯ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು (ಟೈಲರಿಂಗ್, ಫೀಲ್ಡ್ ಸೇಲ್ಸ್ ಎಕ್ಸಿಕ್ಯೂಟಿವ್, ಹಾರ್ಡ್‌ವೇರ್ ಮತ್ತು ನೆಟ್‌ವರ್ಕಿಂಗ್ ಇತ್ಯಾದಿ) ಉಚಿತವಾಗಿ ನೀಡಲಾಗುತ್ತದೆ. ಈ ಎಲ್ಲಾ ತರಬೇತಿಗಳ ಜೊತೆಗೆ ಬೇಸಿಕ್ ಕಂಪ್ಯೂಟರ್, ಕಮ್ಯೂನಿಕೇಶನ್ ಸ್ಕಿಲ್ಸ್, ಉದ್ಯೋಗ ಸಂದರ್ಶನ, ಬೇಸಿಕ್ ಇಂಗ್ಲೀಷ್ ಇತ್ಯಾದಿ ವಿಷಯಗಳನ್ನು ಸಹ ಬೋಧಿಸಲಾಗುವುದು. ಈ ತರಬೇತಿಗಳು ಅಲ್ಪಾವಧಿಯಾಗಿದ್ದು, ವಿದ್ಯಾರ್ಥಿಗಳ ಸರ್ವತೋಮುಖ ಹಾಗೂ ವೃತ್ತಿಜೀವನದ ಬೆಳವಣಿಗೆಗೆಪೂರಕಮತ್ತುಅಡಿಪಾಯವಾಗಿರುತ್ತವೆ. ಈ ತರಬೇತಿಗಳ ದಾಖಲಾತಿ ಪ್ರಾರಂಭವಾಗಿದ್ದು, ಉದ್ಯೋಗಕಾಂಕ್ಷಿಗಳು ಈ ಮಹತ್ವಪೂರ್ಣ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ಈಗಾಗಲೇ ಚಿತ್ರದುರ್ಗ ಪ್ರಧಾನಮಂತ್ರಿ ಕೌಶಲ್ಯ ಕೇಂದ್ರದಲ್ಲಿ 4470 ಯುವಜನರು ತರಬೇತಿ ಪಡೆದು ಹಲವಾರು ಪ್ರತಿಷ್ಠಿತ ಕಂಪನಿಗಳಲ್ಲಿ, ಸಂಘ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9741721889, 9901125700, 7795075070 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಪ್ರಧಾನ ಮಂತ್ರಿ ಕೌಶಲ್ಯ ಕೇಂದ್ರ ಪ್ರಕಟಣೆ ತಿಳಿಸಿದೆ.

### ಹನಿ ನೀರಾವರಿ ಅಳವಡಿಕೆಗೆ ಸಹಾಯಧನ: ಅರ್ಜಿ ಆಹ್ವಾನ

» **ಚಿತ್ರದುರ್ಗ**

2023-24ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟಗಾರಿಕೆ ಬೆಳೆಗಳಿಗೆ (ಅಡಿಕೆ ಬೆಳೆ ಹೊರತುಪಡಿಸಿ) ಹನಿ ನೀರಾವರಿ ಪದ್ಧತಿ ಅಳವಡಿಸಿಕೊಳ್ಳುವ ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರಿಗೆ ಶೇ.90ರ ಸಹಾಯಧನ, ಇತರೆ ವರ್ಗ ರೈತರಿಗೆ ಶೇ.75ರ ಸಹಾಯಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರು ಈ ಹಿಂದೆ ಅಂದರೆ 7 ವರ್ಷಗಳ ಹಿಂದೆ ಸಹಾಯಧನ ಪಡೆದ ಫಲಾನುಭವಿಗಳು ಪುನಃ ಅರ್ಜಿಗಳನ್ನು ಸಲ್ಲಿಸಿ ಸಹಾಯಧನ ಪಡೆಯಲು ಅವಕಾಶವಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರನ್ನು ಭೇಟಿ ಮಾಡಿ ಅವಶ್ಯ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದು ತೋಟಗಾರಿಕೆ ಉಪ ನಿರ್ದೇಶಕರು ತಿಳಿಸಿದ್ದಾರೆ.

### ವಾರದ ಅಂತ್ಯಕ್ಕೆ ರೈತರ ಖಾತೆಗೆ 2 ಸಾವಿರ ಪರಿಹಾರ ಹಣ ವಿತರಣೆ?

» **ಬೆಳಗಾವಿ**

ರಾಜ್ಯದ 223 ತಾಲ್ಲೂಕುಗಳಲ್ಲಿ ಬರಗಾಲ ಆವರಿಸಿದೆ. 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟವಾಗಿದೆ. ಹೀಗಾಗಿ ರಾಜ್ಯ ಸರ್ಕಾರ ರೈತರಿಗೆ 2 ಸಾವಿರ ರೂ. ಬೆಳೆ ಪರಿಹಾರ ನೀಡಲು ನಿರ್ಧರಿಸಿದೆ. ಈ ಬೆಳೆ ಪರಿಹಾರ ವಿತರಣೆ ವಾರದ ಅಂತ್ಯದಿಂದ ಪ್ರಾರಂಭವಾಗುವ ಸಾಧ್ಯತೆ ಇದೆ. ಬೆಳಗಾವಿ, ಡಿಸೆಂಬರ್ 13: ಬರಗಾಲದಿಂದ ಬೆಳೆ ನಷ್ಟವಾಗಿರುವ ಪ್ರತಿ ರೈತರಿಗೆ ಈ ವಾರದ ಅಂತ್ಯದಿಂದ ಸರ್ಕಾರ 2,000 ರೂ. ಪರಿಹಾರವನ್ನು ನೀಡಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನಸಭೆಗೆ ತಿಳಿಸಿದರು. ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನಲ್ಲಿ ಯೋಜನೆಗೆ ಚಾಲನೆ ನೀಡಲಾಗುವುದು. ಬೆಳೆ ಪರಿಹಾರ ಹಣವನ್ನು ಡಿಬಿಟಿ ಮೂಲಕ ನೇರವಾಗಿ ಜಮೆ ಮಾಡಲಾಗುವುದು ಎಂದರು.ರೈತ ನೋಂದಣಿ ಮತ್ತು ಫಲಾನುಭವಿ ಮಾಹಿತಿ ವ್ಯವಸ್ಥೆಯಲ್ಲಿ ನೋಂದಾಯಿಸಿಕೊಳ್ಳಬೇಕು. ಇದು ಮೊದಲ ಬಾರಿಗೆ ಅಪ್ಲಿಕೇಶನ್ ಆಧಾರಿತ ವ್ಯವಸ್ಥೆಯನ್ನು ಪರಿಚಯಿಸಲಾಗಿರುವುದರಿಂದ ಪರಿಹಾರ ನೀಡುವುದು ಸ್ವಲ್ಪ ವಿಳಂಬವಾಗಿದೆ ಎಂದರು. ಕುಡಿಯುವ ನೀರು, ಮೇವು ಪೂರೈಕೆ ಸೇರಿದಂತೆ ಬರಗಾಲದ ಸಮಸ್ಯೆಗಳ ನಿವಾರಣೆಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯಪಡೆಗಳನ್ನು ಸರ್ಕಾರ ರಚಿಸಿದ್ದು, ಇದಕ್ಕಾಗಿ ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರ್‌ಗಳ ಪಿಡಿ ಖಾತೆಗಳಲ್ಲಿ 850 ಕೋಟಿ ರೂ.ಗಳು ಲಭ್ಯವಿದೆ ಎಂದು ಹೇಳಿದರು. ಕೇಂದ್ರದ ಬಿಜೆಪಿ ಸರಕಾರ ನೆರವನ್ನು ಬಿಡುಗಡೆ ಮಾಡುವಲ್ಲಿ ವಿಫಲವಾಗಿದೆ. ಕೇಂದ್ರದ ಬರ ಅಧ್ಯಯನ ತಂಡವು ಅಕ್ಟೋಬರ್ ಮೊದಲ ವಾರದಲ್ಲಿ ರಾಜ್ಯದಲ್ಲಿ ಬರ ಅಧ್ಯಯನ ನಡೆಸಿದೆ. ಅಕ್ಟೋಬರ್ 13 ರಂದು ತನ್ನ ವರದಿಯನ್ನು ಸಲ್ಲಿಸಿದೆ, ಆದರೆ ಇನ್ನೂ ಯಾವುದೇ ಹಣವನ್ನು ಬಿಡುಗಡೆ ಮಾಡಿಲ್ಲ ಎಂದು ಟೀಕಿಸಿದರು. ಮುಖ್ಯಮಂತ್ರಿಗಳು ಕೇಂದ್ರಕ್ಕೆ ಎರಡು ಬಾರಿ ಪತ್ರ ಬರೆದಿದ್ದು, ನಾನು ಎರಡು ಬಾರಿ ಪತ್ರ ಬರೆದರೂ ಪ್ರಯೋಜನವಾಗಿಲ್ಲ. ಕೇಂದ್ರ ಕೃಷಿ ಸಚಿವರು ಮತ್ತು ಗೃಹ ಸಚಿವರು ನಮ್ಮನ್ನು ಭೇಟಿ ಮಾಡಿಲ್ಲ. ಇಲಾಖೆ ಕಾರ್ಯದರ್ಶಿಗಳನ್ನು ಭೇಟಿ ಮಾಡಿ ಜ್ಞಾಪಕ ಪತ್ರ ಸಲ್ಲಿಸುವಂತೆ ಒತ್ತಾಯಿಸಲಾಯಿತು.

# ಚಳ್ಳಕೆರೆ ನಗರದಲ್ಲಿ 4ನೇ ಬಾರಿಗೆ ಅಂತರರಾಜ್ಯಮಟ್ಟದ ಹೊನಲು, ಬೆಳಕಿವಾಲಿಬಾಲ್ ಪಂದ್ಯಾ: ವೀರಭದ್ರಸ್ವಾಮಿ

» **ಚಳ್ಳಕೆರೆ**

ನಗರದ ಬಿಸಿನೀರು ಮುದ್ದಪ್ಪ ಪ್ರೌಢಶಾಲೆ ಆವರಣದಲ್ಲಿ ನಾಲ್ಕನೇ ಬಾರಿಗೆ ಅಂತರರಾಜ್ಯಮಟ್ಟದ ಆಹ್ವಾನಿತ ಪುರುಷರ ಹೊನಲು-ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಡಿ.16,17 ಎರಡು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ ಎಂದು ಟೌನ್ ಯೂತ್‌ಕ್ಲಬ್ ಗೌರವಾಧ್ಯಕ್ಷ ಬಿ.ಟಿ.ವೀರಭದ್ರಸ್ವಾಮಿ ತಿಳಿಸಿದರು.

ಅವರು, ಬಿಎಂಜಿಎಚ್‌ಎಸ್ ಮೈದಾನದಲ್ಲಿ ಹೊನಲು, ಬೆಳಕಿನ ಪಂದ್ಯಾವಳಿ ಕುರಿತಂತೆ ಭರದ ಸಿದ್ದತೆ ನಡೆದಿದ್ದು, ಸಿದ್ದತೆಯನ್ನು ಪರಿಶೀಲಿಸಿ ಪತ್ರಿಕೆಗೆ ಮಾಹಿತಿ ನೀಡಿದರು.

ಡಿ.16 ಶನಿವಾರ ಅಂತರರಾಜ್ಯ ಮಟ್ಟದ ಪಂದ್ಯಾವಳಿಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಉದ್ಘಾಟಿಸಲಿದ್ದು, ಜಿಲ್ಲಾ ಮಟ್ಟದ ವಿವಿಧ ರಾಜಕೀಯ ಪಕ್ಷದ ನೇತಾರರು ಹಾಗೂ ಅಧಿಕಾರಿ ವರ್ಗ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದೆ.





ದಿವಂಗತ ಶ್ರೀನಿವಾಸ್‌ಶರ್ಮ ಸ್ಮರಣಾರ್ಥ ಅವರ ಪತ್ನಿ ಸುಧಾಶ್ರೀನಿವಾಸ್ ಮತ್ತು ಕುಟುಂಬ ವರ್ಗ ವಾಲಿಬಾಲ್ ಪಂದ್ಯದಲ್ಲಿ ವಿಜೇತರಾದವರಿಗೆ ಹಣ ಮತ್ತು ಪಾರಿತೋಷಕವನ್ನು ನೀಡಲಿದ್ದಾರೆ. ಇದರ ಜೊತೆಗೆ ಬೆಸ್ಟ್‌ಸ್ಮ್ಯಾಶರ್, ಬ್ಲಾಕರ್, ಲಿಫ್ಟರ್, ಲಿಬ್ರೊ, ಆಲ್‌ರೌಂಡರ್‌ಗೆ ಪಾರಿತೋಷಕ ನೀಡಲಾಗುವುದು.

ಪ್ರಥಮ ಬಹುಮಾನ 50 ಸಾವಿರ, ದ್ವಿತೀಯ 30 ಸಾವಿರ, ತೃತೀಯ 20 ಸಾವಿರ, ಚತುರ್ಥ ಬಹುಮಾನ 10 ಸಾವಿರ ರೂಪಾಯಿಗಳನ್ನು ನೀಡಲಾಗುವುದು. ಪಂದ್ಯದ ಆಟಗಾರರಿಗೆ ಕೆಲವೊಂದು ಸೂಚನೆಗಳನ್ನು ನೀಡಿದ್ದು ಅವುಗಳನ್ನು ಪಾಲಿಸಬೇಕು. ಕರ್ನಾಟಕ, ಕೇರಳ, ತಮಿಳುನಾಡಿನಿಂದ ಸುಮಾರು 30ಕೂ ಹೆಚ್ಚು ತಂಡ ಆಗಮಿಸುವ ನಿರೀಕ್ಷೆ ಇದೆ ಎಂದರು.

ಹೆಚ್ಚಿನ ಮಾಹಿತಿಗೆ ಗೌರವಾಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ-80503 11363, ಚಿನ್ನ-98664 32974, ರಾಜೇಶ್-99004 43819, ಎನ್.ಚಂದ್ರಶೇಖರ್ 63642 24689ಗೆ ಸಂಪರ್ಕಿಸಲು ಮನವಿ ಮಾಡಲಾಗಿದೆ.

# ಕೇಂದ್ರದ ಯೋಜನೆಗಳನ್ನು ದೇಶದ ಮನೆಮನೆಗೆ ತಲುಪಿಸುವುದು ಭಾರತ ಸಂಕಲ್ಪ ಯಾತ್ರೆ ಉದ್ದೇಶ





» **ಹಿರಿಯೂರು**

ವಿಕಸಿತ ಭಾರತ ಸಂಕಲ್ಪ ಯಾತ್ರೆಯಿಂದ ಕೇಂದ್ರದ ಯೋಜನೆಗಳ ಪರಿಚಯ ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಜನಪ್ರಿಯ ಯೋಜನೆಗಳನ್ನು ದೇಶದ ಎಲ್ಲ ಗ್ರಾಮಗಳು ಸೇರಿದಂತೆ ಮನೆ ಮನೆಗಳಿಗೆ ತಲುಪಿಸುವ ಉದ್ದೇಶವನ್ನು ವಿಕಸಿತ ಭಾರತ ಸಂಕಲ್ಪ ಯಾತ್ರೆ ಹೊಂದಿದೆ ಎಂಬುದಾಗಿ ಆರ್ಥಿಕ ಸಾಕ್ಷರತಾ ಸಂಯೋಜಕರಾದ ಎಸ್. ಕೆ.ಮಧುಸೂದನ್ ಹೇಳಿದರು.

ತಾಲ್ಲೂಕಿನ ರಂಗನಾಥಪುರ, ಇಕ್ಕನೂರು, ಆಲೂರು, ಬಬ್ಬೂರು, ಮಸ್ಕಲ್, ಬ್ಯಾಡರಹಳ್ಳಿ, ಈಶ್ವರಗೆರೆ, ಹಬ್ಬಿನಹೊಳೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆ ಅಂಗವಾಗಿ ದೇಶದ ರಾಷ್ಟ್ರೀಕೃತ ಬ್ಯಾಂಕುಗಳು ಹಾಗೂ ಇತರೆ ಬ್ಯಾಂಕುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ "ಜನಜಾಗೃತಿ" ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.ಕೇಂದ್ರ ಸರ್ಕಾರದ ಯೋಜನೆಗಳನ್ನು ಬಡವರ ಮನೆ ಬಾಗಿಲಿಗೆ ತಲುಪಿಸುವ ಕಾರ್ಯಕ್ರಮ ಇದಾಗಿದ್ದು ದೇಶದ ಎಲ್ಲಾ ನಾಗರೀಕರಿಗೂ ಹಲವು ಕಾರ್ಯಕ್ರಮಗಳನ್ನು ನೀಡಬೇಕೆನ್ನುವುದು ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಮುಖ್ಯ ಉದ್ದೇಶವಾಗಿದ್ದು, ಸಾರ್ವಜನಿಕರು ಈ ಯೋಜನೆಗಳ ಬಗ್ಗೆ ಸಮಗ್ರವಾಗಿ ತಿಳಿದುಕೊಳ್ಳುವ ಮೂಲಕ ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂಬುದಾಗಿ ಅವರು ಹೇಳಿದರು.

ತಾಲೂಕಿನ ವಿವಿಧ ಗ್ರಾಮಗಳಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆ ಅಭಿಯಾನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಭಾಷಣ ವೀಕ್ಷಣೆ ಕಾರ್ಯಕ್ರಮ ಕೇಂದ್ರ ಸರಕಾರದ ನಾನಾ ಯೋಜನೆಗಳನ್ನು ಮನೆಮನೆಗೆ ತಲುಪಿಸುವ ಉದ್ದೇಶ ಹೊಂದಿರುವ ವಿಕಸಿತ ಭಾರತ ಸಂಕಲ್ಪ ಯಾತ್ರೆ ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣವಾಗಿದೆ ಎಂಬುದಾಗಿ ಹೇಳಿದರು.ದೇಶದ ರೈತರ ಸಮಸ್ಯೆಗಳನ್ನು ಅರಿತು ಪಿಎಂ ಕೃಷಿ ಸಮ್ಮಾನ್ ಯೋಜನೆ, ಫಸಲ್ ಭೀಮಾ ಯೋಜನೆ, ರಸಗೊಬ್ಬರ, ಸಬ್ಸಿಡಿ, ದೇಶದ ಪ್ರತಿ ಮನೆಗೆ ಶೌಚಾಲಯ, ಪಿಎಂ ಆವಾಜ್ ಯೋಜನೆ, ಉಜ್ವಲ ಯೋಜನೆ ಅಡಿ ಉಚಿತ ಗ್ಯಾಸ್ ಸಂಪರ್ಕ ನೀಡಿದ್ದು, ಮೋದಿ ನೇತೃತ್ವದ ಕೇಂದ್ರ ಸರ್ಕಾರ ಎಂಬುದಾಗಿ ಅವರು ಮಾಹಿತಿ ನೀಡಿದರಲ್ಲದೆ,

ಸಾಮಾಜಿಕ ಸುರಕ್ಷತೆ ವಿಮೆಯ ಅಗತ್ಯತೆ, ಮಹತ್ವ ಹಾಗೂ ವಿಮೆಯ ಲಾಭದ ಬಗ್ಗೆ ಸಂಪೂರ್ಣವಾಗಿ ಮಾಹಿತಿಯನ್ನು ನೀಡಿದರಲ್ಲದೆ ಡ್ರೋನ್ ಪ್ರಾತ್ಯಕ್ಷಿಕೆಯ ಮೂಲಕ ರೈತರಿಗೆ ಔಷಧಿ ಸಿಂಪಡಣೆಯ ಬಗ್ಗೆ ತಿಳುವಳಿಕೆ ನೀಡಿದರು. ಇದೇ ಸಂದರ್ಭದಲ್ಲಿ ಎಲ್ಲರಿಗೂ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು, ಎಲ್ಲಾ ಸಾರ್ವಜನಿಕರು ಪ್ರತಿಜ್ಞಾವಿಧಿಯನ್ನು ಸ್ವೀಕರಿಸಿದರು.

ಈ ಕಾರ್ಯಕ್ರಮದಲ್ಲಿ ಬಬ್ಬೂರು ಕೃಷಿ ಕೇಂದ್ರದ ವಿಜ್ಞಾನಿಗಳಾದ ಓಂಕಾರಪ್ಪ, ಜಿಲ್ಲಾ ವೈದ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಮುಖ್ಯಸ್ಥರು, ಅನೇಕ ಗಣ್ಯರು, ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

## ಶೌಚಾಲಯಗಳ ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿ



» **ಹಿರಿಯೂರು**

ನಗರದಲ್ಲಿ ಸಾರ್ವಜನಿಕರ ಅಗತ್ಯತೆಗಾಗಿ ನಿರ್ಮಿಸಲಾಗಿರುವ ಶೌಚಾಲಯದ ಸ್ವಚ್ಛತೆಯನ್ನು ಕಾಪಾಡುವುದು ನಗರಸಭೆ ಸಿಬ್ಬಂದಿಗಳದಷ್ಟೇ ಜವಾಬ್ದಾರಿಯಲ್ಲ, ನಗರದ ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿಯಾಗಿದೆ ಎಂಬುದಾಗಿ ನಗರಸಭೆ ಪೌರಾಯುಕ್ತರಾದ ಹೆಚ್. ಮಹಂತೇಶ್ ಹೇಳಿದರು.ನಗರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಶೌಚಾಲಯ ಅಭಿಯಾನದ ಅಂಗವಾಗಿ ಪಬ್ಲಿಕ್ ಟಾಯ್ಲೆಟ್ ಟೂರ್ಸ್ ಕಾರ್ಯಕ್ರಮ ಹಮ್ಮಿಕೊಂಡಿದ್ದು ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ನಮ್ಮ ನಗರ ಬಯಲು ಶೌಚಮುಕ್ತವಾಗಬೇಕು, ಈ ನಿಟ್ಟಿನಲ್ಲಿ ಸಾರ್ವಜನಿಕರು ಪ್ರತಿಮನೆಯಲ್ಲೂ ಶೌಚಾಲಯ ನಿರ್ಮಿಸಿ, ಬಳಕೆ ಮಾಡುವ ಮೂಲಕ ನಗರದ ಸ್ವಚ್ಛತೆಗೆ ಸಹಕರಿಸಬೇಕು ಎಂಬುದಾಗಿ ಅವರು ಹೇಳಿದರು.ಇದೇ ಸಂದರ್ಭದಲ್ಲಿ ಸಾರ್ವಜನಿಕರ ಸಮ್ಮುಖದಲ್ಲಿ ಜಾತಪಥ ಸಂಚಲನದೊಂದಿಗೆ ಶೌಚಾಲಯ ಬಳಸುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.ಈ ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಕರಾದ ಮೀನಾಕ್ಷಿ, ಕಿರಿಯ ಆರೋಗ್ಯ ನಿರೀಕ್ಷಕರಾದ ಮಾಲಿಂಗರಾಜ್, ಮೋಹನ್, ಅಜಯ್, ದಫೇದಾರ್ ಈರಖ್ಯಾತಪ್ಪ, ಮತ್ತು ಪೌರಕಾರ್ಮಿಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಮಾರುಕಟ್ಟೆ ಸಂತೆ ಮೈದಾನಕ್ಕೆ ಸ್ಥಳಾಂತರಕ್ಕೆ ವ್ಯಾಪಾರಿಗಳಿಗೆ ಪೌರಾಯುಕ್ತರು ತಾಕೀತು

» **ಹಿರಿಯೂರು**

ನೆಹರು ಮಾರುಕಟ್ಟೆ ಸಮೀಪ ಬೆಳಗಿನ ವೇಳೆ ಹಣ್ಣು ವ್ಯಾಪಾರ ನಡೆಯುತ್ತದೆ ಒಂದೇ ಕಡೆ ಸೊಪ್ಪು ತರಕಾರಿ ಹಣ್ಣು ಹೂವಿನ ವ್ಯಾಪಾರ ನಡೆಯುವುದರಿಂದ ಕಿರಿದಾದ ರಸ್ತೆಯಲ್ಲಿ ಪದೇ ಪದೇ ಸಂಚಾರ ದಟ್ಟಣೆ ಉಂಟಾಗುತ್ತದೆ ಆದ್ದರಿಂದ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಈ ಮಾರುಕಟ್ಟೆಯನ್ನು ಸಂತೆ ಮೈದಾನಕ್ಕೆ ಸ್ಥಳಾಂತರ ಮಾಡಬೇಕಾಗಿದೆ ಎಂಬುದಾಗಿ ನಗರಸಭೆ ಪೌರಾಯುಕ್ತರಾದ ಹೆಚ್.ಮಹಂತೇಶ್ ಹೇಳಿದರು.

ಪ್ರತಿನಿತ್ಯ ಬೆಳಿಗ್ಗೆ ನಡೆಯುವ ಸೊಪ್ಪು-ತರಕಾರಿ ವಹಿವಾಟನ್ನು ನೆಹರೂ ಮಾರುಕಟ್ಟೆಯಿಂದ ಕೆ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣ ಸಮೀಪ ಇರುವ ಸಂತೆ



ಮೈದಾನಕ್ಕೆ ಸ್ಥಳಾಂತರಿಸುವಂತೆ ವ್ಯಾಪಾರಿಗಳಿಗೆ ಸೂಚನೆ ನೀಡಿ, ನಂತರ ಅವರು ಮಾತನಾಡಿದರು .

ಸಂತೆ ನಡೆಯುವ ಜಾಗ ನಗರದ ಮಧ್ಯ ಭಾಗದಲ್ಲಿದ್ದು ವಾರಪೂರ್ತಿ ವ್ಯಾಪಾರ ಮಾಡಬಹುದಾಗಿದೆ, ಆದ್ದರಿಂದ ವ್ಯಾಪಾರಿಗಳು ನೆಹರು ಮಾರುಕಟ್ಟೆ ಬದಲಾಗಿ ಸಂತೆ ಮೈದಾನದಲ್ಲಿ ವ್ಯಾಪಾರ ವಹಿವಾಟು ಮುಂದುವರೆಸಬೇಕೆಂಬ ಉದ್ದೇಶದಿಂದ ಈ ಕ್ರಮಕ್ಕೆ ಮುಂದಾಗಿದ್ದೇವೆ ವರ್ತಕರು ಸಹಕಾರ ನೀಡಬೇಕು ಎಂಬುದಾಗಿ ಹೇಳಿದರು.

ನಗರದ ವ್ಯಾಪಾರಿಗಳು ಈ ಕುರಿತು ಮಾತನಾಡಿ, ದಶಕಗಳಿಂದ ಇಲ್ಲಿಯೇ ವ್ಯಾಪಾರ ವಹಿವಾಟು ನಡೆಸುತ್ತಿದ್ದೇವೆ, ವಾಯುವಿಹಾರಕ್ಕೆ ಹೋಗಿ ಬರುವವರಿಗೆ ಸೊಪ್ಪು ತರಕಾರಿ ಖರೀದಿಸಲು ಇದು ಸೂಕ್ತ ಸ್ಥಳವಾಗಿದ್ದು, ಇಲ್ಲಿಯೇ ವಹಿವಾಟು ಮುಂದುವರಿಸಲು ಅವಕಾಶ ಕೊಡಬೇಕು ಎಂಬುದಾಗಿ ಮನವಿ ಮಾಡಿದರು.

ಆದರೆ ಈ ಕೋರಿಕೆಯನ್ನು ತಿರಸ್ಕರಿಸಿದ ಪೌರಾಯುಕ್ತರು ಸಂತೆ ನಡೆಯುವ ಜಾಗ ಎಲ್ಲರಿಗೂ ಸೂಕ್ತವಾದ ಸ್ಥಳವಾಗಿದೆ, ಹೊರ ಊರುಗಳಿಂದ ಬಸ್ ಇಳಿದು ಬರುವವರಿಗೆ, ನಗರದ ವಿವಿಧ ಬಡಾವಣೆಗಳ ನಿವಾಸಿಗಳಿಗೂ ಅನುಕೂಲವಾಗುತ್ತದೆ, ಇಲ್ಲಿ ವೈಯಕ್ತಿಕ ಪ್ರತಿಷ್ಠೆಯ ಪ್ರಶ್ನೆಯೇ ಇಲ್ಲ, ನಾಗರೀಕರ ಸುರಕ್ಷತೆಯೇ ನಮಗೆ ಮುಖ್ಯ ಎಂಬುದಾಗಿ ಅವರು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಹಿರಿಯ ಆರೋಗ್ಯ ನಿರೀಕ್ಷಕರಾದ ಶ್ರೀಮತಿ ಸಂಧ್ಯಾ, ಸೇರಿದಂತೆ ನಗರಸಭೆ ಪೌರಕಾರ್ಮಿಕರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಜಿಲ್ಲಾಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಸೂಚನೆ

# ನಗರದ ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿ

» **ಹಿರಿಯೂರು**

ನಗರಸಭೆ ವ್ಯಾಪ್ತಿಯಲ್ಲಿ ಬೀದಿದೀಪ ಅಳವಡಿಕೆ ಮತ್ತು ನಿರ್ವಹಣೆ ದೊಡ್ಡ ಸವಾಲಾಗಿದ್ದು, ಇದನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಲು ಸರ್ಕಾರದ ಮಟ್ಟದಲ್ಲಿ ನಿಯಮಾವಳಿಗಳಿಗೆ ಬದಲಾವಣೆ ತರಬೇಕು ಎಂಬುದಾಗಿ ನಗರಸಭೆ ಸದಸ್ಯರಾದ ಬಿ.ಎನ್. ಪ್ರಕಾಶ್ ಮನವಿ ಮಾಡಿದರು.

ನಗರದ ನಗರಸಭೆ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರ ನೇತೃತ್ವದಲ್ಲಿ ನಡೆಸಲಾದ ನಗರಸಭೆ ಸದಸ್ಯರು, ಅಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಗರದಲ್ಲಿ ಹತ್ತಾರು ನೂತನ ಬಡಾವಣೆಗಳು ತಲೆ ಎತ್ತಿವೆ, ಜನಸಂಖ್ಯೆ 70ಸಾವಿರಕ್ಕೆ ದಾಟಿದೆ, ಆದರೆ ಪೌರಕಾರ್ಮಿಕರ ಸಂಖ್ಯೆ ಮೊದಲಿನಷ್ಟೇ ಇರುವುದರಿಂದ, ನಗರದ ಸ್ವಚ್ಛತೆ ದೊಡ್ಡ ಸವಾಲಾಗಿದೆ,ಜನಸಂಖ್ಯೆಗೆಅನುಗುಣವಾಗಿ



ಪೌರಕಾರ್ಮಿಕರನ್ನು ನೇಮಿಸಬೇಕು, ರಾಜಕಾಲುವೆ ದುರಸ್ತಿಪಡಿಸಬೇಕು, ರಸ್ತೆಗಳಲ್ಲಿ ಗುಂಡಿಬಿದ್ದಿದ್ದು, ಮುಚ್ಚಿಸಬೇಕು ಎಂಬುದಾಗಿ ಸದಸ್ಯರು ಮನವಿ ಮಾಡಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಮಾತನಾಡಿ, ನಗರದಲ್ಲಿರುವ ವಾರ್ಡ್ ಗಳಿಗೆ ತಲಾ 30ರಂತೆ ಒಂದು ಸಾವಿರ ಎಲ್.ಇಡಿ ಬಲ್ಬ್ ಗಳನ್ನು ಸ್ವಂತ ಖರ್ಚಿನಿಂದ ಕೊಡಿಸುತ್ತೇವೆ, ಈ ಬಗ್ಗೆ ದೂರುಗಳು ಬರದಂತೆ ಸದಸ್ಯರು ಕೆಲಸ ಮಾಡಿ ಉದ್ಯಾನಗಳ ಅಭಿವೃದ್ಧಿ, ಶುದ್ಧ ಕುಡಿಯುವ ನೀರಿನ ಪೂರೈಕೆ, ಸ್ವಚ್ಛತೆ, ಕಸವಿಲೇವಾರಿಗೆ ಹೆಚ್ಚಿನ ಒತ್ತು ಕೊಡಬೇಕು

ಅಲ್ಲದೆ ಕಸ ವಿಲೇವಾರಿ ಸಂಬಂಧ ನಗರದ ಜನರಲ್ಲಿ ಜಾಗೃತಿ ಮೂಡಿಸಿ, ನಗರದಲ್ಲಿ ನಡೆಯುವ ಕಳವು ತಡೆಯಲು ಆಯಕಟ್ಟಿನ ಸ್ಥಳಗಳಲ್ಲಿ ಸಿಸಿಟಿವಿಯ ಕ್ಯಾಮೆರಾಗಳನ್ನು ಅಳವಡಿಸಲು ಸೂಕ್ತಕ್ರಮ ಕೈಗೊಳ್ಳಬೇಕು ಎಂಬುದಾಗಿ ಸಚಿವರು ನಗರಸಭೆ ಸದಸ್ಯರಿಗೆ ಸೂಚನೆ ನೀಡಿದರಲ್ಲದೆ,

ನಗರದಲ್ಲಿ ರಸ್ತೆ ಅಭಿವೃದ್ಧಿ, ರಾಜಕಾಲುವೆ ಸರಿಪಡಿಸಲು ತಗುಲುವ ವೆಚ್ಚದ ಪಟ್ಟಿಯನ್ನು ನೀಡಿ, ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂಬುದಾಗಿ ಸಚಿವರಾದ ಡಿ.ಸುಧಾಕರ್ ಭರವಸೆ ನೀಡಿದರು.

ಈ ಸಭೆಯಲ್ಲಿ ನಗರಸಭೆ ಪೌರಾಯುಕ್ತರಾದ ಹೆಚ್.ಮಹಂತೇಶ್, ನಗರಸಭೆ ಸದಸ್ಯರುಗಳಾದ ಈ.ಮಂಜುನಾಥ್, ಈರಲಿಂಗೇಗೌಡ, ಜಿ.ಎಸ್.ತಿಪ್ಪೇಸ್ವಾಮಿ, ವಿಠಲ್ ಪಾಂಡುರಂಗ, ಗುಂಡೇಶ್ ಕುಮಾರ್, ಶಂಷುನ್ನೀಸಾ, ರತ್ನಮ್ಮ, ಅಂಬಿಕಾ, ಶಿವಣ್ಣ, ರಮೇಶ್, ಸಾದತ್ ಉಲ್ಲಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡಿ.14 ರಂದು ನೀರಾವರಿ ನಿರ್ವಹಣೆ ಮತ್ತು ಜಲಮೂಲಗಳ ಸಂರಕ್ಷಣೆ ಕಾರ್ಯಾಗಾರ

» ದಾವಣಗೆರೆ

ಜಲಸಂಪನ್ಮೂಲ ಮತ್ತು ಭೂ ನಿರ್ವಹಣಾ ಸಂಸ್ಥೆ ಹಾಗೂ ಯು.ಬಿ.ಡಿ.ಟಿ ಕಾಲೇಜ್ ಆಫ್ ಇಂಜಿನಿಯರಿಂಗ್ ದಾವಣಗೆರೆ ಇವರ ಸಹಯೋಗದಲ್ಲಿ ಡಿ.14 ರಂದು ಬೆಳಗ್ಗೆ 10.30 ಕ್ಕೆ ನಗರದ ಯು.ಬಿ.ಡಿ.ಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನೀರಾವರಿ ನಿರ್ವಹಣೆ ಮತ್ತು ಜಲಮೂಲಗಳ ಸಂರಕ್ಷಣೆ ಕುರಿತು ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ.ಯು.ಬಿ.ಡಿ.ಟಿ ಕಾಲೇಜಿನ ಪ್ರೊಫೆಸರ್ ಮತ್ತು ಡೀನ್‌ರಾದ ಡಾ. ಕೆ.ಮಂಜುನಾಥ ಉಪಸ್ಥಿತರಿರುವರು. ಯುಬಿಡಿಟಿಸಿಇ ಪ್ರಾಂಶುಪಾಲರಾದ ಡಾ; ಡಿ.ಪಿ.ನಾಗರಾಜಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಧಾರವಾಡದ ವಾಲ್ಮಿ ನಿರ್ದೇಶಕರಾದ ಪ್ರೊ. ಬಿ.ವೈ.ಬಂಡಿವಡ್ಡರ ಹಾಗೂ ಪ್ರೊಫೆಸರ್ ಭೀಮಾನಾಯ್ಕ್, ಯುಬಿಡಿಟಿ ಪ್ರಾಧ್ಯಾಪಕರು ಮತ್ತು ಅಧ್ಯಕ್ಷರಾದ ಡಾ.ಹೆಚ್.ಈರಮ್ಮ ಪಾಲ್ಗೊಳ್ಳುವರು.

### ಕಾನ್‌ಸ್ಟೇಬಲ್ ಮತ್ತು ರೈಫಲ್ ಮ್ಯಾನ್ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಸಿಬ್ಬಂದಿ ನೇಮಕಾತಿ ಆಯೋಗದ (ಎಸ್‌ಎಸ್‌ಸಿ) ವತಿಯಿಂದ ಕೇಂದ್ರ ಸಶಸ್ತ್ರ ಪೋಲೀಸ್ (ಸಿಎಪಿಎಫ್) ಮತ್ತು ಎಸ್‌ಎಸ್‌ಎಫ್ ಪಡೆಗಳಲ್ಲಿ ಕಾನ್‌ಸ್ಟೇಬಲ್ ಮತ್ತು ಅಸ್ಸಾಂ ರೈಫಲ್‌ನಲ್ಲಿ ರೈಫಲ್ ಮ್ಯಾನ್ ಹುದ್ದೆಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯನ್ನು ಹೊಂದಿರುವ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್ https://ssc.nic.in or www.sskkr.kar.nic.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ಡಿ.31 ಕೊನೆಯ ದಿನ. ಮತ್ತು ಅಭ್ಯರ್ಥಿಗಳು 18 ರಿಂದ 23 ವರ್ಷ ವಯೋಮಾನದವರಾಗಿರಬೇಕು, (ಪ.ಜಾತಿ/ಪ.ಪಂಗಡ ಮತ್ತು ಒ.ಬಿ.ಸಿ ಅಭ್ಯರ್ಥಿಗಳಿಗೆ ನಿಯಮಾನುಸಾರ ಸಡಿಲಿಕೆ ಇರುತ್ತದೆ). ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ  08025502520 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದಾವಣಗೆರೆ. ದೂ. ಸಂ : 08192259446 ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ.ಡಿ.ತಿಳಿಸಿದ್ದಾರೆ.

### ಪವರ್ ಗ್ರೀಡ್ ಕಾರ್ಪೊರೇಷನ್ ಆಫ್ ಇಂಡಿಯಾ ವತಿಯಿಂದ ಚಿಗಟೇರಿ ಜಿಲ್ಲಾಸ್ಪತ್ರೆಗೆ ವಿವಿಧ ವೈದ್ಯಕೀಯ ಉಪಕರಣಗಳ ಹಸ್ತಾಂತರ

» ದಾವಣಗೆರೆ

ಬಡ ಜನರ ಅನುಕೂಲಕ್ಕಾಗಿ ಪವರ್ ಗ್ರೀಡ್ ಕಾರ್ಪೊರೇಷನ್ ಆಫ್ ಇಂಡಿಯಾ ಸಂಸ್ಥೆಯು ಚಿಗಟೇರಿ ಜಿಲ್ಲಾಸ್ಪತ್ರೆಗೆ ರೂ.3.35 ಕೋಟಿ ವೆಚ್ಚದಲ್ಲಿ ವಿವಿಧ ವೈದ್ಯಕೀಯ ಉಪಕರಣಗಳನ್ನು ನೀಡಿರುವುದು ಸಂತಸ ತಂದಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ. ವಿ ತಿಳಿಸಿದರು. ಬುಧವಾರ ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನಡೆದ ಪವರ್ ಗ್ರೀಡ್ ಕಾರ್ಪೊರೇಷನ್ ಆಫ್ ಇಂಡಿಯಾ ವತಿಯಿಂದ ಚಿಗಟೇರಿ ಜಿಲ್ಲಾಸ್ಪತ್ರೆಗೆ ಸಿ.ಎಸ್.ಆರ್ ಉಪಕ್ರಮದಡಿ ವೈದ್ಯಕೀಯ ಉಪಕರಣಗಳ ಹಸ್ತಾಂತರ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆಗೆ ದಾವಣಗೆರೆ ಸುತ್ತಮುತ್ತಲಿರುವ 5 ಜಿಲ್ಲೆಗಳಿಂದ ಒಳರೋಗಿ ಹಾಗೂ ಹೊರರೋಗಿ ವಿಭಾಗಕ್ಕೆ ಸಾರ್ವಜನಿಕರು ಬಂದು ಉತ್ತಮ ಚಿಕಿತ್ಸೆ ಪಡೆಯಲು ಪವರ್ ಗ್ರಿಡ್ ನವರತ್ನ ಕಂಪನಿಯಿಂದ ನೀಡಲಾದ ವೈದ್ಯಕೀಯ ಉಪಕರಣಗಳು ತುಂಬಾ ಸಹಕಾರಿಯಾಗಿದೆ. ಉತ್ತಮ ಚಿಕಿತ್ಸೆಗೆ ಅನುಗುಣವಾಗಿ ಹೊಸ ತಂತ್ರಜ್ಞಾನ ಅಳವಡಿಕೆಯಲ್ಲಿ ಈ ಯಂತ್ರೋಪಕರಣಗಳನ್ನು ಚಿಗಟೇರಿ ಆಸ್ಪತ್ರೆಗೆ ನೀಡಿದೆ ಎಂದರು. ಪವರ್ ಗ್ರೀಡ್ ಸಂಸ್ಥೆಯು ಬಡ ಜನರ ಅನುಕೂಲಕ್ಕಾಗಿ ಉತ್ತಮ ಗುಣಮಟ್ಟದ ಹೊಸ ಅಲ್ಟ್ರಾ ಸೌಂಡ್ ಯಂತ್ರ, ಲೆಪ್ರೋಸ್ಕೋಪಿ, ಎಂಡೋಸ್ಕೋಪಿ, ಎಕ್ಸ್ ರೇ ಹಾಗೂ ರಕ್ತ ಭಂಡಾರಕ್ಕೆ ಬೇಕಾದಂತಹ ಸಾಮಗ್ರಿಗಳನ್ನು ನೀಡಿ, ರೋಗಿಗಳ ಚಿಕಿತ್ಸೆ ಮಟ್ಟವನ್ನು ಸುಧಾರಿಸಲು ಪವರ್ ಗ್ರೀಡ್ ಸಂಸ್ಥೆಯು ಉತ್ತಮ ಕಾರ್ಯ ನಿರ್ವಹಿಸಿದೆ ಎಂದು ಅವರು ಪ್ರಶಂಸೆ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಚಿಗಟೇರಿ ಜಿಲ್ಲಾ ಆಸ್ಪತ್ರೆಯ ವಾರ್ಡ್‌ಗಳಿಗೆ ತೆರಳಿ ವಿವಿಧ ವೈದ್ಯಕೀಯ ಉಪಕರಣಗಳ ಗುಣಮಟ್ಟ ಪರಿಶೀಲಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್. ಷಣ್ಮುಖಪ್ಪ, ಜಿಲ್ಲಾ ಶಸ್ತ್ರಚಿಕಿತ್ಸಾಧಿಕಾರಿ ಡಾ. ನಾಗೇಂದ್ರಪ್ಪ, ಪವರ್ ಗ್ರೀಡ್ ಕಾರ್ಪೊರೇಷನ್ ಆಫ್ ಇಂಡಿಯಾದ ಡೆಪ್ಯೂಟಿ ಚೀಫ್ ಜನರಲ್ ಮ್ಯಾನೇಜರ್ ಮಿಥಿಲೇಶ್ ಕುಮಾರ್, ಹಿರಿಯೂರಿನ ಪವರ್ ಗ್ರೀಡ್ ಕಾರ್ಪೊರೇಷನ್ ಆಫ್ ಇಂಡಿಯಾದ ಜನರಲ್ ಮ್ಯಾನೇಜರ್ ಹರೀಶ್ ನಾಯರ್ ಉಪಸ್ಥಿತರಿದ್ದರು.

# ನಗರದ ಅವೈಜ್ಞಾನಿಕ ಡಿವೈಡರ್ ತೆರವುಗೊಳಿಸಿ

» ಚಿತ್ರದುರ್ಗ

ನಗರದಲ್ಲಿ ಅವೈಜ್ಞಾನಿಕವಾಗಿ ನಿರ್ಮಾಣವಾಗಿರುವ ಡಿವೈಂಡರ್ ತೆರವುಗೊಳಿಸಿ ಸಾರ್ವಜನಿಕರ ಓಡಾಟಕ್ಕೆ ವಿಶಾಲವಾದ ರಸ್ತೆ ಹಾಗೂ ಫುಟ್‌ಪಾತ್ ನಿರ್ಮಿಸಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಬೆಳಗಾವಿಯಲ್ಲಿ ನಡೆಯುತ್ತಿರುವ ವಿಧಾನಸಭೆ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭಾಧ್ಯಕ್ಷ ಹಾಗೂ ರಾಜ್ಯದ ಮುಖ್ಯಮಂತ್ರಿಯವರ ಗಮನ ಸೆಳೆದು ಚಿತ್ರದುರ್ಗದಲ್ಲಿ ಡಿವೈಡರ್ ತೆರವುಗೊಳಿಸಲು ಲೋಕೋಪಯೋಗಿ ಇಲಾಖೆಗೆ ಸೂಚನೆ ನೀಡುವಂತೆ ಮನವಿ ಮಾಡಿರುವುದು ಸ್ವಾಗತಾರ್ಹ.



ರಾಜಕಾರಣಿಗಳು ಹಾಗೂ ಅಧಿಕಾರಿಗಳ ನಡುವೆ ಸಹಕಾರವಿಲ್ಲದ ಕಾರಣ ಚಿತ್ರದುರ್ಗ ಅಭಿವೃದ್ಧಿ ಕಾಣದೆ ಕುಂಠಿತಗೊಳ್ಳುತ್ತಲೆ ಬರುತ್ತಿದೆ. ಚಳ್ಳಕೆರೆ ಟೋಲ್‌ಗೇಟ್‌ನಿಂದ ಪ್ರವಾಸಿ ಮಂದಿರದವರೆಗೆ ಮಾರ್ಕ್‌ಗೆ ಅನುಗುಣವಾಗಿ ರಸ್ತೆ ಅಗಲೀಕರಣವಾಗಿಲ್ಲ. ಹೊಳಲ್ಕೆರೆರಸ್ತೆ,ದಾವಣಗೆರೆರಸ್ತೆ,ಮೆದೇಹಳ್ಳಿ ರಸ್ತೆ ಹಾಗೂ ಜೆಸಿಆರ್. ಜೋಗಿಮಟ್ಟಿ ರಸ್ತೆ ಕೂಡ ಗುರುತು ಮಾಡಿದಷ್ಟು ಅಗಲೀಕರಣವಾಗಿಲ್ಲ. ಎರಡು ಬಾರಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಗಿದ್ದರೂ ರಸ್ತೆ ಅಗಲೀಕರಣದಲ್ಲಿ ಆಗಿರುವ ತಾರತಮ್ಯ ಮಾತ್ರ ನಿವಾರಣೆಯಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಎಸ್.ಬಿ.ಎಂ. ಸರ್ಕಲ್‌ನಲ್ಲಿ ಅವೈಜ್ಞಾನಿಕ ಸಿಗ್ನಲ್‌ಲೈಟ್ ಅಳವಡಿಸಿರುವುದರಿಂದ ವೃದ್ದರು, ಮಹಿಳೆಯರು, ಮಕ್ಕಳು ರಸ್ತೆ ದಾಟುವುದು ಕಷ್ಟವಾಗಿದೆ. ಚಂದ್ರವಳ್ಳಿಯಲ್ಲಿ ವೈಜ್ಞಾನಿಕ ಹಂಪ್ಸ್‌ಗಳಿವೆ. ತುರುವನೂರು ರಸ್ತೆಯಲ್ಲಿ ಬೈಕ್, ಕಾರ್ ಶೋರೂಂನವರು ರಸ್ತೆ ಅತಿಕ್ರಮಣ ಮಾಡಿಕೊಂಡು ವಾಹನಗಳನ್ನು ನಿಲ್ಲಿಸುವುದರಿಂದ ಓಡಾಟಕ್ಕೆ ಅಡಚಣೆಯಾಗುತ್ತಿದೆ. ಲೋಕೋಪಯೋಗಿ ಇಲಾಖೆಯವರು ರಸ್ತೆ, ಫುಟ್‌ಪಾತ್‌ಗಳನ್ನು ನುಂಗಿ ನೀರು ಕುಡಿದಿದ್ದಾರೆಂದು ಕೆ.ಟಿ.ಶಿವಕುಮಾರ್ ಆಪಾದಿಸಿದರು.ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಕಾರ್ಯದರ್ಶಿ ಜಗದೀಶ್ ಸಿ. ಸುರೇಶ್, ಅಖಿಲೇಶ್, ಮಹಮದ್ ರಫಿ, ಶಾನ್, ಅವಿನಾಶ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಮಲ್ಲಸಮುದ್ರ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ಮಹಿಳೆಯರಿಂದ ಪ್ರತಿಭಟನೆ

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ದೇವರೆಡ್ಡಿಹಳ್ಳಿ ಪಂಚಾಯಿತಿಗೆಸೇರಿದಮಲ್ಲಸಮುದ್ರ ಗ್ರಾಮದಲ್ಲಿ ಅಕ್ರಮವಾಗಿ ಮದ್ಯ ಮಾರಾಟವಾಗುತ್ತಿರುವುದನ್ನು ತಡೆಯುವಂತೆ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಮಲ್ಲಸಮುದ್ರ ಗ್ರಾಮಸ್ಥರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಮಲ್ಲಸಮುದ್ರ ಗ್ರಾಮ ನೆರೆಯ ಆಂಧ್ರ ಗಡಿಭಾಗಕ್ಕೆ ಸೇರಿರುವುದರಿಂದ ಆಂಧ್ರದಿಂದ ಇಲ್ಲಿಗೆ ಬಂದು ಮದ್ಯ ಸೇವಿಸಿ ದಿನವೂ ಗಲಾಟೆ ಮಾಡುವುದು ಸಾಮಾನ್ಯವಾಗಿದೆ.

ಮಹಿಳೆಯರು, ಮಕ್ಕಳು ನಿರ್ಭಯವಾಗಿ ಗ್ರಾಮದಲ್ಲಿ ಓಡಾಡುವುದು ಕಷ್ಟವಾಗಿದೆ. ಪೆಟ್ಟಿಗೆ ಅಂಗಡಿಗಳಲ್ಲಿ ರಾಜಾರೋಷವಾಗಿ ಮದ್ಯ ಮಾರಾಟ ಮಾಡಲಾಗುತ್ತಿದೆ. ಅನೇಕ ಬಾರಿ ಅಬಕಾರಿ ಇಲಾಖೆಗೆ ಮನವಿ ಸಲ್ಲಿಸಿದರೂ ಕ್ರಮ ಕೈಗೊಂಡಿಲ್ಲ ಎಂದು ಮಹಿಳೆಯರು ದೂರಿದರು.



ರೈತ ಮುಖಂಡ ಕೆ.ಪಿ.ಭೂತಯ್ಯ, ಎಂ.ಯಶೋಧ, ತಿಮ್ಮಕ್ಕ, ಕಲ್ಲಮ್ಮ, ಶಾರದಮ್ಮ, ಹೊನ್ನೂರಮ್ಮ, ನಂದಿನಿ, ನಾಗಮ್ಮ, ಶಿಲ್ಪ, ಭಾಗ್ಯಮ್ಮ, ರತ್ನಮ್ಮ, ಮಾರಕ್ಕ, ಯಲ್ಲಕ್ಕ, ಪೆನ್ನಕ್ಕ ಇನ್ನು ಮುಂತಾದವರು ಪ್ರತಿಭಟನೆಯಲ್ಲಿದ್ದರು.

# ಇಷ್ಟಾರ್ಥ ಸಿದ್ಧಿಗಾಗಿ ಕುಂಚಿಟಿಗ ಅಷ್ಟದೈವ ಯಾತ್ರೆಗೆ ಸಕಲ ಸಿದ್ಧತೆ: ಅಧ್ಯಯನಕಾರ ಎಸ್.ವಿ. ರಂಗನಾಥ್




» ಹಿರಿಯೂರು

ಕರ್ನಾಟಕ ರಾಜ್ಯ ಕುಂಚಿಟಿಗರ ಒಕ್ಕೂಟದ ವತಿಯಿಂದ ಡಿಸೆಂಬರ್ 24 ನೇ ಭಾನುವಾರ ಬೆಳಿಗ್ಗೆ 4–30 ಕ್ಕೆ ನಗರದ ಪ್ರವಾಸಿ ಮಂದಿರದಿಂದ ಇಷ್ಟಾರ್ಥ ಸಿದ್ಧಿಗಾಗಿ ಕುಂಚಿಟಿಗರ ಅಷ್ಟದೈವ ಯಾತ್ರೆ ಹೊರಡಲು ಸಕಲ ಸಿದ್ಧತೆ ಮಾಡಲಾಗಿದೆ ಎಂಬುದಾಗಿ ಕುಂಚಿಟಿಗ ಕುಲಶಾಸ್ತ್ರ ಅಧ್ಯಯನಕಾರ ಎಸ್.ವಿ.ರಂಗನಾಥ್ ತಿಳಿಸಿದ್ದಾರೆ.

ಮರಡಿಗುಡ್ಡ ರಂಗನಾಥಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಗಡಿನಾಡುಕುಂಚಿಟಿಗರಭಾವೈಕ್ಯತಾಪ್ರವಾಸಕ್ಕೆಚಾಲನೆಕೊಡಲಾಗುವುದು. ಈ ಪ್ರವಾಸದಲ್ಲಿ ಮಾಗೋಡು ಕಂಬದ ರಂಗನಾಥಸ್ವಾಮಿ, ಮೂಗನಹಳ್ಳಿ ಅಮ್ಮಾಜಿ ಕಾವಲೇಶ್ವರಿ, ಶಿವನಗೆರೆ ಹೊನ್ನೇಶ್ವರಸ್ವಾಮಿ, ವೀರಾಪುರಕರಿಯಮ್ಮ, ಏಳುಮಂದೆಮ್ಮ, ಹೊಸಕೆರೆ ವೀರನಾಗಮ್ಮ, ಬೊಮ್ಮಲಿಂಗೇಶ್ವರ, ತಾಡಿನಾಗಮ್ಮ, ಕೊಂಡವಾಡಿ ಚೌಡೇಶ್ವರಿ, ವಡ್ಡಗೆರೆವೀರನಾಗಮ್ಮ, ಎಲೆರಾಂಪುರಲಕ್ಷ್ಮೀನರಸಿಂಹಸ್ವಾಮಿ ಮತ್ತು ಕುಂಚಿಟಿಗ ಮಹಾಸಂಸ್ಥಾನ ಮಠದಲ್ಲಿ ಕುಂಚಿಟಿಗರ ಜ್ವಲಂತ ಸಮಸ್ಯೆ ಕುರಿತು ಚಿಂತನ–ಮಂಥನ ಸಭೆಯೊಂದಿಗೆ ಒಂದು ದಿನದ ಪ್ರವಾಸ ಮುಕ್ತಾಯ ಮಾಡಲಾಗುವುದು ಎಂದು ತಿಳಿಸಿದರು.

ಈ ಸಭೆಯಲ್ಲಿ ಕ್ಯಾಧಿಗುಂಟೆ ಜಯರಾಮಯ್ಯ ಮಾತನಾಡಿ, ಕುಂಚಿಟಿಗರ ಕೇಂದ್ರ ಓಬಿಸಿ, ಪ್ರತ್ಯೇಕ ಅಭಿವೃದ್ಧಿ ನಿಗಮ, ಪ್ರವರ್ಗ 1 ರಲ್ಲಿ ಮೀಸಲಾತಿ, ರೈತಾಪಿ ಮಕ್ಕಳಿಗೆ ಕಂಕಣಭಾಗ್ಯ, ಕಾಲ ಕಾಲಕ್ಕೆ ಮಳೆ ಬೆಳೆ, ಆಯುರಾರೋಗ್ಯ ಅಷ್ಟೈಶ್ವರ್ಯ ಸಂಪತ್ ಸಮೃದ್ಧಿಯನ್ನು 101 ಕುಂಚಿಟಿಗ ಕುಲದೈವಗಳು ನೆರವೇರಸಲಿ ಎಂದು ಪ್ರಾರ್ಥಿಸಿದರು.

ಈ ಸಭೆಯಲ್ಲಿ ಕರ್ನಾಟಕ ರಾಜ್ಯ ಕುಂಚಿಟಿಗರ ಒಕ್ಕೂಟದ ಅಧ್ಯಕ್ಷ ಕಸವನಹಳ್ಳಿರಮೇಶ್, ಹುಲಿರಂಗನಾಥ್, ಕುಬೇರಪ್ಪ, ಶಶಿಕಲಾ, ಜಯರಾಯ್ಯ, ಗಿರಿಸ್ವಾಮಿ, ಮೈಸೂರು ಶಿವಣ್ಣ, ಅವಿನಾಶ್, ದೇವರಾಜ, ಲಕ್ಷ್ಮಣ್ ಗೌಡ್ರು, ಬಾಬುಕಾಮಟೆ ಸೇರಿದಂತೆ ಅನೇಕ ಕುಂಚಿಟಿಗ ಮುಖಂಡರು ಉಪಸ್ಥಿತರಿದ್ಧರು.

# ಕಾಂತರಾಜ್, ಸದಾಶಿವ ಆಯೋಗದ ಒಳ ಮೀಸಲಾತಿ ವರದಿ ಜಾರಿಗೆ ಒತ್ತಾಯಿಸಿ ಧರಣಿ

» ಚಿತ್ರದುರ್ಗ

ಕಾಂತರಾಜ್ ಮತ್ತು ಸದಾಶಿವ ಆಯೋಗದ ಒಳ ಮೀಸಲಾತಿ ವರದಿಗಳ ಜಾರಿಗೆ ಒತ್ತಾಯಿಸಿ ಡಿ.14 ರಂದು ಬೆಳಿಗ್ಗೆ 11 ಕ್ಕೆ ಜಿಲ್ಲಾಧಿಕಾರಿ ಕಚೇರಿ ವೃತ್ತದಲ್ಲಿ ಧರಣಿ ನಡೆಸಲಾಗುವುದೆಂದು ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಸಿ.ಕೆ. ಮಹೇಶ್ ತಿಳಿಸಿದರು.ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಅಹಿಂದ ಜಾತಿಗಳ ಜನಸಂಖ್ಯೆ ಶೇ. ಎಂಬತ್ತರಷ್ಟಿದ್ದರೂ ಕೇವಲ ಇಪ್ಪತ್ತು ಪರ್ಸೆಂಟ್‌ನಷ್ಟಿರುವ ಬಲಾಢ್ಯ ಜಾತಿಗಳು ಅಹಿಂದ ವರ್ಗಕ್ಕೆ ಸಿಗಬೇಕಾದ ಸಂಪತ್ತನ್ನು ಕಬಳಿಸುತ್ತಿವೆ. ಆಯಾ ಜಾತಿಗೆ ಅನಗುವಣವಾಗಿ ಸಂಪತ್ತು ಹಂಚಿಕೆಯಾಗಬೇಕಾಗಿರುವುದರಿಂದ ಕಾಂತರಾಜ್ ವರದಿ ಹಾಗೂ ಸದಾಶಿವ ಆಯೋಗದ ಒಳ ಮೀಸಲಾತಿ ವರದಿಗಳನ್ನು ಸರ್ಕಾರ ಜಾರಿಗೆ ತರಬೇಕು. ಅಹಿಂದ ಜಾತಿಗಳ ಮತಗಳನ್ನು ಸರಕುಗಳನ್ನಾಗಿ ಮಾರ್ಪಡಿಸಿಕೊಂಡಿರುವ ಪ್ರಬಲರು ರಾಜಕೀಯವಾಗಿ ಅಧಿಕಾರ ಹಿಡಿದಿದ್ದಾರೆ. ಈಗಲಾದರೂ ಅಹಿಂದ ವರ್ಗದವರು ಎಚ್ಚೆತ್ತುಕೊಳ್ಳಬೇಕೆಂದು ಹೇಳಿದರು.

ಅಹಿಂದ ಜಾಗೃತಿ ವೇದಿಕೆ ಜಿಲ್ಲಾ ಪ್ರಧಾನ ಸಂಚಾಲಕ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ ಹಿಂದುಳಿದ ಜಾತಿಗಳ ಅಭಿವೃದ್ದಿಗಾಗಿ ಮೊಟ್ಟ ಮೊದಲು ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಧ್ವನಿ ಎತ್ತಿದಾಗ ಹಿಂದುಳಿದ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಾತಿ ಕಲ್ಪಿಸುವುದಕ್ಕಾಗಿ ಕಾಕಾ ಕಾಲೇಲ್ಕರ್ ಆಯೋಗ ರಚನೆಯಾಗಿ ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿತು. ಕೇಂದ್ರ ಸರ್ಕಾರ ಜಾರಿ ಮಾಡಿದ ಮಂಡಲ್ ವರದಿ ಮೂಲೆಗುಂಪಾಗಿದೆ ಎಂದರು.

ಪ್ರೊ.ಬಿ.ಕೃಷ್ಣಪ್ಪ ನೇತೃತ್ವದಲ್ಲಿ ರಾಜ್ಯಾದ್ಯಂತ ಹಿಂದುಳಿದ ವರ್ಗಗಳ ವರದಿಗಳ ಜಾರಿಗಾಗಿ ದಲಿತರು, ಅಹಿಂದ ವರ್ಗದವರು ತೀವ್ರ ಪ್ರತಿಭಟನೆ ನಡೆಸಿದ ಫಲವಾಗಿ ಡಿ.ದೇವರಾಜ್ ಅರಸುರವರು ಮುಖ್ಯಮಂತ್ರಿಯಾಗಿದ್ದಾಗ ಎಲ್.ಜಿ.ಹಾವನೂರು ಆಯೋಗ ರಚಿಸಿ ವರದಿ ಸಿದ್ದಪಡಿಸಿದ್ದನ್ನು ಬಲಾಢ್ಯರು ಉಗ್ರವಾಗಿ ಪ್ರತಿಭಟಿಸಿದರು. ಹಾಗಾಗಿ ಕಾಂತರಾಜ್ ಮತ್ತು ಸದಾಶಿವ ಆಯೋಗದ ಒಳ ಮೀಸಲಾತಿ ವರದಿ ಜಾರಿಗಾಗಿ ಗುರುವಾರ ಹಮ್ಮಿಕೊಂಡಿರುವ ಧರಣಿಯಲ್ಲಿ ಅಹಿಂದ ಜಾತಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.ಅಹಿಂದ ಜಾಗೃತಿ ವೇದಿಕೆ ಜಿಲ್ಲಾ ಸಂಚಾಲಕರುಗಳಾದ ಹೆಚ್.ಮಂಜಪ್ಪ, ಡಿ.ದುರುಗೇಶಪ್ಪ, ನಗರಸಭೆ ಮಾಜಿ ಅಧ್ಯಕ್ಷರುಗಳಾದ ಬಿ.ಕಾಂತರಾಜ್, ಹೆಚ್.ಸಿ.ನಿರಂಜನಮೂರ್ತಿ, ಮಾಜಿ ಉಪಾಧ್ಯಕ್ಷ ರಾಮಜ್ಜ, ಮಾಜಿ ಸದಸ್ಯ ಶ್ರೀರಾಮ್, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.ಕಾಂತರಾಜ್ ವರದಿ ಮತ್ತು ಸದಾಶಿವ ಆಯೋಗ ಒಳ ಮೀಸಲಾತಿ ವರದಿಗಳ ಜಾರಿಗೆ ಒತ್ತಾಯಿಸಿ ಗುರುವಾರ ನಡೆಯುವ ಧರಣಿ ಕುರಿತು ಸಾಮಾಜಿಕ ಸಂಘರ್ಷ ಸಮಿತಿಯ ಸಿ.ಕೆ.ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

## ವಾರ್ಷಿಕ ಕ್ರೀಡಾಕೂಟ

ದಾವಣಗೆರೆ: ದಾವಣಗೆರೆ ಗೃಹ ರಕ್ಷಕದಳ ವತಿಯಿಂದ ಡಿ.14 ರಂದು ಮಧ್ಯಾಹ್ನ 1 ಗಂಟೆಗೆ ನಗರದ ದೇವರಾಜ್ ಅರಸ್ ಬಡಾವಣೆಯ ಬಿ. ಬ್ಲಾಕ್‌ನಲ್ಲಿರುವ ಜಿಲ್ಲಾ ಗೃಹರಕ್ಷಕ ದಳದ ಕಚೇರಿಯಲ್ಲಿ ಜಿಲ್ಲಾ ಮಟ್ಟದ ವಾರ್ಷಿಕ ವೃತ್ತಿಪರ ಮತ್ತು ಕ್ರೀಡಾಕೂಟದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಹೋಂಗಾರ್ಡ್ಸ್ ಕಮಾಂಡೆಂಟ್ ಡಾ.ಸುಜಿತ್‌ಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ನಗರದ ಪೊಲೀಸ್ ಉಪಾಧೀಕ್ಷಕರಾದ ಮಲ್ಲೇಶ್ ದೊಡ್ಡಮನಿ ಭಾಗವಹಿಸುವರು.

## ಪ್ರಮುಖ ಸುದ್ದಿ

# 23ರಿಂದ ದಾವಣಗೆರೆ ಬೆಣ್ಣೆದೋಸೆ ಹಬ್ಬ

## ಎಂಬಿಎ, ಗ್ಲಾಸ್‌ಹೌಸ್‌ನಲ್ಲಿ ದೋಸೋತ್ಸವ– ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್

» ದಾವಣಗೆರೆ

ದಾವಣಗೆರೆ ಬೆಣ್ಣೆದೋಸೆ ಇತಿಹಾಸ ಪ್ರಸಿದ್ದವಾಗಿದ್ದು ಇದಕ್ಕೊಂದು ಬ್ರಾಂಡಿಂಗ್ ನೀಡಲು ಜಿಲ್ಲಾಡಳಿತ ಡಿಸೆಂಬರ್ 23, 24, 25 ರಂದು ದಾವಣಗೆರೆಯಲ್ಲಿ ಬೆಣ್ಣೆದೋಸೆ ಹಬ್ಬವನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೋಸೆ ಉತ್ಸವ ಆಯೋಜನೆಗೆ ಸಂಬಂಧಿಸಿದಂತೆ ಸಿದ್ದತೆಯ ಕುರಿತು ಏರ್ಪಡಿಸಲಾದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಈಗಾಗಲೇ ಹೋಟೆಲ್ ಮಾಲಿಕರೊಂದಿಗೆ ಚರ್ಚಿಸಲಾಗಿದ್ದು ದಿನಾಂಕ ಮತ್ತು ಸ್ಥಳವನ್ನು ಅಂತಿಮಗೊಳಿಸಲಾಗಿದೆ. ದಾವಣಗೆರೆ ನಗರದ ಎಂ.ಬಿ.ಎ.



ಮೈದಾನ ಮತ್ತು ಗ್ಲಾಸ್‌ಹೌಸ್ ಮುಂಭಾಗ ದೋಸೆ ಹಬ್ಬವನ್ನು ಆಯೋಜಿಸಲಾಗಿದ್ದು ಮೂರು ದಿನಗಳ ಕಾಲ ಬೆಳಗ್ಗೆ 8 ಗಂಟೆಯಿಂದ ರಾತ್ರಿವರೆಗೆ ದೋಸೆ ಸವಿಯಬಹುದಾಗಿದೆ.

ಬೆಣ್ಣೆದೋಸೆ ಹಬ್ಬದಲ್ಲಿ ಸುಮಾರು 5 ಲಕ್ಷ ಜನರು ಭಾಗಿಯಾಗಬೇಕೆಂಬ ಗುರಿ ಹೊಂದಲಾಗಿದೆ.

ಇದಕ್ಕಾಗಿ ಎರಡು ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಈಗಾಗಲೇ ದೋಸೆ ಹೋಟೆಲ್ ಮಾಲಿಕರೊಂದಿಗೆ ಸಭೆ ನಡೆಸಲಾಗಿದ್ದು 10 ಕ್ಕಿಂತ ಹೆಚ್ಚು ಹೋಟೆಲ್ ಮಾಲಿಕರು ಭಾಗವಹಿಸುವರು. ದೋಸೆ ಹಬ್ಬವನ್ನು ಏರ್ಪಡಿಸುವ ಮೂಲಕ ದಾವಣಗೆರೆ ದೋಸೆಯ ಸಾಂಪ್ರದಾಯಿಕತೆ ಉಳಿಸುವ ಮೂಲಕ ಗುಣಮಟ್ಟವನ್ನು ಕಾಪಾಡಿಕೊಂಡು ದಾವಣಗೆರೆ ಬೆಣ್ಣೆದೋಸೆಗೆ ಬ್ರಾಂಡಿಂಗ್ ಕಲ್ಪಿಸುವುದು ಈ ಹಬ್ಬದ ಉದ್ದೇಶವಾಗಿದೆ.

ದೋಸೆ ಹೋಟೆಲ್‌ಗಳಿಗೆ ಮಾನದಂಡದನ್ವಯ ಮುಂದಿನ ದಿನಗಳಲ್ಲಿ ಅಧಿಕೃತ ಟ್ಯಾಗ್ ನೀಡಲಿದ್ದು ಇದಕ್ಕಾಗಿ ಆಹಾರ ಸುರಕ್ಷತಾ ಕಾಯಿದೆ ನಿಯಮ ಪಾಲನೆ, ಗುಣಮಟ್ಟ, ಕಲಬೆರಕೆ ರಹಿತ ಆಹಾರದ ಮಾನದಂಡಗಳನ್ನು ಅಳವಡಿಸಿಕೊಳ್ಳುವವರಿಗೆ ಈ ಟ್ಯಾಗ್ ನೀಡಲಾಗುತ್ತದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಉಪವಿಭಾಗಾಧಿಕಾರಿ ದುರ್ಗಶ್ರೀ, ಪಾಲಿಕೆ ಆಯುಕ್ತರಾದ ರೇಣುಕಾ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T